ಕನ್ನಡಪ್ರಭ
ಮಂಗಳವಾರ 5.05.2026

ಗರಿಷ್ಠ 34°C | ಕನಿಷ್ಠ 23°C

ಸುದ್ದಿ ಸಿಂಚನ

ಶಾಲಾ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಅಶ್ಲೀಲ ನೃತ್ಯ ನಿಷೇಧ: ಸ್ವಾಗತ

ಭಟ್ಕಳ: ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಅಶ್ಲೀಲ ಹಾಡುಗಳಿಗೆ ಮಕ್ಕಳಿಂದ ನೃತ್ಯ ಮಾಡಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಿರುವ ಸರ್ಕಾರದ ನಿರ್ಧಾರವನ್ನು ಆಲ್ ಇಂಡಿಯಾ ಐಡಿಯಲ್ ಟೀಚರ್ಸ್ ಅಸೋಸಿಯೇಷನ್ (ಐಟಾ) ಕರ್ನಾಟಕ ಘಟಕವು ಸ್ವಾಗತಿಸಿದೆ. ಈ ಕುರಿತು ಪ್ರಕಟಣೆ ನೀಡಿರುವ ಐಟಾ ಕರ್ನಾಟಕ ರಾಜ್ಯಾಧ್ಯಕ್ಷ ಎಂ. ಆರ್. ಮಾನ್ವಿ, ಶಿಕ್ಷಣದ ಪಾವಿತ್ರ್ಯ ಕಾಪಾಡುವ ನಿಟ್ಟನಲ್ಲಿ ಸರ್ಕಾರ ಕೈಗೊಂಡಿರುವ ಈ ಮಹತ್ವದ ಕ್ರಮಕ್ಕೆ ಅಭಿನಂದನೆ ಸಲ್ಲಿಸಿದರು. ಶಾಲಾ ಮಕ್ಕಳ ಗೌರವ ಮತ್ತು ಶಿಕ್ಷಣದ ಘನತೆಯನ್ನು ಉಳಿಸುವ ಇಂತಹ ನಿರ್ಧಾರಗಳು ಕಾಲದ ಅವಶ್ಯಕತೆ. ಈ ನಿಯಮವು ಕೇವಲ ಸರ್ಕಾರಿ ಶಾಲೆಗಳಲ್ಲಷ್ಟೇ ಸೀಮಿತವಾಗದೆ, ಎಲ್ಲ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲೂ ಸಮರ್ಪಕವಾಗಿ ಜಾರಿಯಾಗಬೇಕು ಎಂದು ಅವರು ಅಭಿಪ್ರಾಯ ಪಟ್ಟರು. ಅಶ್ಲೀಲ ಹಾಡುಗಳಿಗೆ ನೃತ್ಯ ಮಾಡಿಸಿದಲ್ಲಿ ಸಂಬಂಧಪಟ್ಟ ಮುಖ್ಯ ಶಿಕ್ಷಕರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂಬ ಇಲಾಖೆಯ ಎಚ್ಚರಿಕೆಗೆ ಎಐಐಟಿಎ ಬೆಂಬಲ ವ್ಯಕ್ತಪಡಿಸಿದೆ. ಜಿಲ್ಲಾ ಉಪನಿರ್ದೇಶಕರು ಈ ಬಗ್ಗೆ ಕಟ್ಟುನಿಟ್ಟಿನ ನಿಗಾವಹಿಸಬೇಕೆಂದು ಸಂಘಟನೆಯು ಆಗ್ರಹಿಸುತ್ತದೆ ಎಂದು ತಿಳಿಸಿದ್ದಾರೆ.

ಡ್ರೋನ್ ಕ್ಯಾಮೆರಾ ಮರಳಿಸಿ ಪ್ರಾಮಾಣಿಕತೆ ಮೆರೆದ ವ್ಯಾಪಾರಸ್ಥರು



ಹಳಿಯಾಳ: ಆತ್ಯಾಧುನಿಕ ತಂತ್ರಜ್ಞಾನದ ಹೈಟೆಕ್ ಮಾದರಿಯ ಸುಮಾರು ₹ 4 ಲಕ್ಷ ಮೌಲ್ಯದ ಡ್ರೋನ್ ಕ್ಯಾಮೆರಾವನ್ನು ಕಳೆದುಕೊಂಡ ಮಾಲಿಕರಿಗೆ ಇಬ್ಬರು ವ್ಯಾಪಾರಸ್ಥರು ವಾಪಸ್ ನೀಡುವ ಮೂಲಕ ಪ್ರಾಮಾಣಿಕತೆ ತೋರಿಸಿದ್ದಾರೆ. ಪಟ್ಟಣದ ಪರಿಸರ ಪ್ರವಾಸೋದ್ಯಮಿ ಅಲ್ತಾಫ್ ಆರ್. ಬಸರಿಕಟ್ಟಿಯವರು ಭಾನುವಾರ ದಾಂಡೇಲಿ ತೆರಳುವಾಗ ಕಾರಿನಿಂದ ಆಕಸ್ಮಿಕವಾಗಿ ಈ ಕ್ಯಾಮೆರಾ ರಸ್ತೆಯಲ್ಲಿ ಬಿದ್ದಿತ್ತು. ಭಾನುವಾರ ಸಂತೆ ದಿನವಾಗಿದ್ದು, ಪಟ್ಟಣದ ಫಿಶ್ ಮಾರ್ಕೆಟಿನ ರಫೀಕ್ ಧಾರವಾಡಕರ ಹಾಗೂ ಸೈಪುಲ್ ಧಾರವಾಡಕರ ಇವರಿಗೆ ಹಳಿಯಾಳ-ದಾಂಡೇಲಿ ರಸ್ತೆಯಲ್ಲಿ ಡ್ರೋನ್ ಕ್ಯಾಮೆರಾ ಸಿಕ್ಕಿತ್ತು. ಆದರೆ ಅವರು ತಮಗೆ ದೊರೆತ ಬೆಲೆಬಾಳುವ ಕ್ಯಾಮೆರಾವನ್ನು ಹಳಿಯಾಳ ಪೊಲೀಸರಿಗೆ ಒಪ್ಪಿಸಿದರು. ಈ ಬಗ್ಗೆ ಪೊಲೀಸರು ವಿಚಾರಣೆ ನಡೆಸಿದರು. ಸೋಮವಾರ ಹಳಿಯಾಳ ಠಾಣೆಯಲ್ಲಿ ಹಳಿಯಾಳ ಪಿಎಸ್ಐ ಬಸವರಾಜ ಮಬನೂರ ಕ್ಯಾಮೆರಾವನ್ನು ಬಸರಿಕಟ್ಟಿಯವರಿಗೆ ಹಸ್ತಾಂತರಿಸಿದರು. ಇದೇ ಸಂದರ್ಭ ಪ್ರಾಮಾಣಿಕತೆ ತೋರಿದವರಿಗೂ ಸನ್ಮಾನಿಸಿ ಗೌರವಿಸಿದರು.

ಅಡಕೆ ಧಾರಣೆ

• ಸಿದ್ದಾಪುರ	ಕನಿಷ್ಠ	ಗರಿಷ್ಠ
ರಾಶಿ	46099	54099
ತಟ್ಟಿಬೆಟ್ಟೆ	36000	41869
ಕೆಂಪಗೋಟು	33289	35600
ಬಿಳಿಗೋಟು	26419	35899
ಚಾಲಿ	39500	47439
ಕೋಕಾ	23909	33899
ಕಾಳುಮೆಣಸು	66000	69289



ಕರ್ನಾಟಕ ವಿವಿಯ ಎಂಕಾಂ ವಿಭಾಗದಲ್ಲಿ 4 ಬಂಗಾರದ ಪದಕ, 3 ನಗದು ಪುರಸ್ಕಾರ ಪಡೆದ ವಿಶ್ವದರ್ಶನ ಬಿಇಡಿ ಕಾಲೇಜಿನ ಶ್ರೀಲಕ್ಷ್ಮೀ ಹೆಗಡೆ ಮಾಗೋಡ ಅವರನ್ನು ಯಲ್ಲಾಪುರದ ವಿಶ್ವದರ್ಶನ ಶಿಕ್ಷಣ ಸಮೂಹದ ಆವಾರದಲ್ಲಿ ಅಭಿನಂದಿಸಲಾಯಿತು.



ಶಿರಸಿ ತಾಲೂಕಿನ ಶ್ರೀ ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನದ ಆಶ್ರಯದಲ್ಲಿ ನಡೆಯುತ್ತಿರುವ ಐದು ದಿನಗಳ ಶಾಸ್ತ್ರಾಧ್ಯಯನ ಗೋಷ್ಠಿ ಕಾರ್ಯಕ್ರಮವನ್ನು ಮಠದ ಕಿರಿಯ ಶ್ರೀ ಆನಂದಬೋಧೇಂದ್ರ ಸರಸ್ವತೀ ಮಹಾಸ್ವಾಮಿಗಳು ಉದ್ಘಾಟಿಸಿದರು.

ಹವಗಿ ಗ್ರಾಮದಲ್ಲಿ ಬಸ್ ನಿಲುಗಡೆ ತಾಣ ಲೋಕಾರ್ಪಣೆ

• **ಕನ್ನಡಪ್ರಭ ವಾರ್ತೆ** ಹಳಿಯಾಳ

ತಾಲೂಕಿನ ಹವಗಿ ಗ್ರಾಮದಲ್ಲಿನ ಗ್ರಾಪಂ ಹಾಗೂ ಪ್ರಥಮ ದರ್ಜೆ ಸರ್ಕಾರಿ ಮಹಾವಿದ್ಯಾಲಯದ ಎದುರು ಶಾಸಕ ಆರ್.ವಿ. ದೇಶಪಾಂಡೆ ಅವರ 2023-24ನೇ ಸಾಲಿನ ಪ್ರದೇಶಾಭಿವೃದ್ಧಿ ಅನುದಾನ ₹4.50 ಲಕ್ಷ ವೆಚ್ಚದಲ್ಲಿ ನಿರ್ಮಿಸಿದ ಬಸ್ ನಿಲುಗಡೆ ತಾಣವನ್ನು ಶಾಸಕ ಆರ್.ವಿ. ದೇಶಪಾಂಡೆ ಲೋಕಾರ್ಪಣೆ ಮಾಡಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಫಿರೋಜಷಾ ಸೋಮನಕಟ್ಟಿ, ತಾಪಂ ಇಒ ವಿಲಾಸರಾಜ್ ಪ್ರಸನ್ನ, ವಿವಿಧ ಇಲಾಖೆಗಳ ಅನುಷ್ಠಾನ ಅಧಿಕಾರಿಗಳು ಹಾಗೂ ಜಿಪಂ ಮಾಜಿ ಉಪಾಧ್ಯಕ್ಷ ಸಂತೋಷ ರೇಣಕೆ, ಕಾಂಗ್ರೆಸ್ ಮುಖಂಡ ರವಿ ತೋರಣಗಟ್ಟಿ, ಪಿಡಿಒ, ಹವಗಿ ಗ್ರಾಮದ ಹಿರಿಯರು ಇದ್ದರು.

ಸಮಾಜದಲಿ ಮಾನವೀಯ ಮೌಲ್ಯಗಳ ಅಧಃಪತನ

ಮನೆಯಂಗಳದ ಕಾರ್ಯಕ್ರಮದಲ್ಲಿ ರಾಮಕೃಷ್ಣ ಗುಂದಿ ಕಳವಳ



ಡಾ. ದಿನಕರ ದೇಸಾಯಿ ಸ್ಮಾರಕ ಪ್ರತಿಷ್ಠಾನದ ಮನೆಯಂಗಳದ ಕಾರ್ಯಕ್ರಮ ನಡೆಯಿತು.

> **ಕವಿಯಿತ್ರಿ ಹೊನ್ನಮ್ಮ ನಾಯಕ ತಮ್ಮ ಕೃತಿಗಳ ಮೂಲಕ ಸಮಾಜದಲ್ಲಿ ಸದಾಶಯಗಳನ್ನು ಬಿತ್ತುವ ಕಾರ್ಯ ಮಾಡುತ್ತಿರುವುದು ಅರ್ಥಪೂರ್ಣ.**
> • **ರಾಮಕೃಷ್ಣ ಗುಂದಿ** ಡಾ. ದಿನಕರ ದೇಸಾಯಿ ಸ್ಮಾರಕ ಪ್ರತಿಷ್ಠಾನದ ಅಧ್ಯಕ್ಷ

• **ಕನ್ನಡಪ್ರಭ ವಾರ್ತೆ** ಅಂಕೋಲಾ

ಇಂದಿನ ಸಮಾಜದಲ್ಲಿ ಮಾನವೀಯ ಮೌಲ್ಯಗಳ ಅಧಃಪತನ ಕಾಣುತ್ತಿದ್ದೇವೆ. ಸಾಹಿತಿಗಳು ನಮ್ಮ ಕೃತಿಗಳ ಮೂಲಕ ಸಮಾಜದಲ್ಲಿ ಮಾನವೀಯ ಮೌಲ್ಯಗಳ ಮರುಪೂರಣ ಕಾರ್ಯ ಮಾಡಬೇಕಿದೆ. ಕವಿಯಿತ್ರಿ ಹೊನ್ನಮ್ಮ ನಾಯಕ ತಮ್ಮ ಕೃತಿಗಳ ಮೂಲಕ ಸಮಾಜದಲ್ಲಿ ಸದಾಶಯಗಳನ್ನು ಬಿತ್ತುವ ಕಾರ್ಯ ಮಾಡುತ್ತಿರುವುದು ಅರ್ಥಪೂರ್ಣ ಎಂದು ಡಾ. ದಿನಕರ ದೇಸಾಯಿ ಸ್ಮಾರಕ ಪ್ರತಿಷ್ಠಾನದ ಅಧ್ಯಕ್ಷ ರಾಮಕೃಷ್ಣ ಗುಂದಿ ಹೇಳಿದರು.

ಡಾ. ದಿನಕರ ದೇಸಾಯಿ ಸ್ಮಾರಕ ಪ್ರತಿಷ್ಠಾನದ ಮನೆಯಂಗಳದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಪ್ರಾರಂಭದಲ್ಲಿ ಕವಿಯಿತ್ರಿ ಹೊನ್ನಮ್ಮ ತನ್ನ ಸಾಹಿತ್ಯಕ್ಕೆ ಪ್ರೇರಣೆ ಕುರಿತು ಮಾತನಾಡಿದರು. ತನ್ನ ಗುರುವರ್ಯ ಸು.ರಂ. ಎಕ್ಕುಂಡಿ, ಆನಂದಾಶ್ರಮ ಶಾಲೆಯ ಸಾಹಿತ್ಯಿಕ ವಾತಾವರಣ, ದಿನಕರ ದೇಸಾಯಿ ಎನ್.ಆರ್. ನಾಯಕ, ವಿಷ್ಣು ನಾಯಕರ ಸಾಹಿತ್ಯದ ಪರಿಣಾಮ ತಾನು ಸಾಹಿತ್ಯ ಕ್ಷೇತ್ರದಲ್ಲಿ ಅಲ್ಪಸ್ವಲ್ಪ ಕೃಷಿ ಮಾಡುವಂತಾಯಿತೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಹಿರಿಯ ಸಾಹಿತಿ ಶಾಂತಾರಾಮ ಹಿಚಕಡ ಕಾವ್ಯ ಬಿಟ್ಟು ಬದುಕಿಲ್ಲ, ಮಾನವ ಮನುಷ್ಯನಾಗಲು ಸಾಹಿತ್ಯದ ಸ್ಪರ್ಶ ಅವಶ್ಯವೆಂದರು. ಶಿಕ್ಷಕಿ ವೀಣಾ ಜೋಶಿ ಪ್ರಾರ್ಥಿಸಿದರು. ಕಾರ್ಯದರ್ಶಿ ಜಗದೀಶ ನಾಯಕ ಹೊಸ್ಕೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಜೆ. ಪ್ರೇಮಾನಂದ, ಪುಷ್ಪಾ ನಾಯ್ಕ, ವಿಠ್ಠಲ ಗಾಂವಕಾರ, ಜಿ.ಆರ್. ತಾಂಡೇಲ, ಶ್ರೀಧರ ನಾಯ್ಕ, ಅಮಿತಾ ನಾಯ್ಕ, ರಾಮಮೂರ್ತಿ ನಾಯಕ, ರವೀಂದ್ರ ಕೇಣಿ, ಕೃಷ್ಣ ಹಿಚಕಡ, ದೇವಿದಾಸ ಸುವರ್ಣ ಕವಿತೆ ವಾಚಿಸಿದರು.

ಶಿಕ್ಷಕ ಜಯಶೀಲ ಆಗೇರ ವಂದಿಸಿದರು. ಲೇಖಕ ಮಹಾಂತೇಶ ರೇವಡಿ ಕಾರ್ಯಕ್ರಮ ನಿರೂಪಿಸಿದರು. ಹೊನ್ನಮ್ಮ ನಾಯಕರ ಮನೆಯಂಗಳ ಕಾರ್ಯಕ್ರಮದಲ್ಲಿ ಹಿರಿಕಿರಿಯ ಸಾಹಿತಿಗಳು ಉಪಸ್ಥಿತರಿದ್ದು, ಹೊನ್ನಮ್ಮ ನಾಯಕರ ಕೃತಿಗಳ ಅವಲೋಕನ, ಕವನವಾಚನ ಕಾರ್ಯಕ್ರಮ ನಡೆಯಿತು.

ಸರ್ಕಾರಿ ಶಾಲೆಗಳ ಸಮಗ್ರ ಅಭಿವೃದ್ಧಿಗೆ ಕ್ರಮ: ವೈದ್ಯ

ಲಾಂಛನ ಬಿಡುಗಡೆಗೊಳಿಸಿದ ಜಿಲ್ಲಾ ಉಸ್ತುವಾರಿ ಸಚಿವ

• **ಕನ್ನಡಪ್ರಭ ವಾರ್ತೆ** ಹೊನ್ನಾವರ

ಶತಮಾನ ಪೂರೈಸಿರುವ ತಾಲೂಕಿನ ಮಾಳ್ಕೋಡ, ಕೆಳಗಿನ ಇಡಗುಂಜಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಮಗ್ರ ಮೂಲಭೂತ ಅಭಿವೃದ್ಧಿಗೆ ಅಗತ್ಯ ಕ್ರಮ ತಗೆದುಕೊಳ್ಳಲಾಗುವುದು. ಎಲ್ಲಾ ಕೆಲಸಗಳನ್ನು ತ್ವರಿತವಾಗಿ ಪ್ರಾರಂಭಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್.ವೈದ್ಯ ಹೇಳಿದರು.

ತಮ್ಮ ಕಚೇರಿಯಲ್ಲಿ ಮಾಳ್ಕೋಡ ಕೆಳಗಿನ ಇಡಗುಂಜಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಶತಮಾನೋತ್ಸವ ಸಮಿತಿಯ ಲಾಂಛನ ಬಿಡುಗಡೆಗೊಳಿಸಿ ಮಾತನಾಡಿದರು. ಸಮಿತಿಯ ಮನವಿಯಂತೆ ಶಾಲೆಗೆ ಅಗತ್ಯವಿರುವ ಕೊಠಡಿ ಹಾಗೂ ಶಾಲಾ ಆವಾರಕ್ಕೆ ಕಂಪೌಂಡ್ ಮತ್ತು ವಾರಂಡಕ್ಕೆ ಇಂಟರ್‌ಲಾಕ್ ಅಳವಡಿಕೆ, ಶೌಚಾಲಯ ನಿರ್ಮಾಣ ಸೇರಿದಂತೆ ಶಾಲೆಯ ಅಭಿವೃದ್ಧಿಗೆ ಆಗಬೇಕಾಗಿರುವ ಕಾಮಗಾರಿ ಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದು. ತ್ವರಿತವಾಗಿ ಕಾಮಗಾರಿ ಮಾಡುವುದಕ್ಕೆ ಸ್ಥಳೀಯವಾಗಿ ಯಾರಾದರೂ ಜವಾಬ್ದಾರಿಯನ್ನು ತಗೆದುಕೊಳ್ಳಿ. ಮುಂದಿನ ಕೆಲವು ದಿನಗಳಲ್ಲಿ ಶಾಲೆಗೆ ಭೇಟಿ ನೀಡಲಾಗುವುದು ಎಂದರು.

> **ಶಾಲೆಗೆ ಅಗತ್ಯವಿರುವ ಕೊಠಡಿ ಹಾಗೂ ಶಾಲಾ ಆವಾರಕ್ಕೆ ಕಂಪೌಂಡ್ ಮತ್ತು ವಾರಂಡಕ್ಕೆ ಇಂಟರ್‌ಲಾಕ್ ಅಳವಡಿಕೆ, ಶೌಚಾಲಯ ನಿರ್ಮಾಣ ಸೇರಿದಂತೆ ಶಾಲೆಯ ಅಭಿವೃದ್ಧಿಗೆ ಆಗಬೇಕಾಗಿರುವ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದು.**
> • **ಮಂಕಾಳ ಎಸ್.ವೈದ್ಯ** ಜಿಲ್ಲಾ ಉಸ್ತುವಾರಿ ಸಚಿವ

ಈ ಸಂದರ್ಭ ಶತಮಾನೋತ್ಸವ ಸಮಿತಿಯ ಅಧ್ಯಕ್ಷ ನಾಗರಾಜ ನಾಯ್ಕ ಮಾಳ್ಕೋಡ, ಗೌರವಾಧ್ಯಕ್ಷ ಬಾಲಚಂದ್ರ ಎಂ.ನಾಯ್ಕ ಮತ್ತು ಎಸ್.ಡಿ.ಎಂ.ಸಿ ಅಧ್ಯಕ್ಷ ರಾಜೇಶ ಎಂ.ಶೆಟ್ಟಿ, ಹಳೆ ವಿದ್ಯಾರ್ಥಿಗಳು ಸಂಘದ ಅಧ್ಯಕ್ಷ ಪ್ರಶಾಂತ ಎಚ್.ನಾಯ್ಕ, ಗ್ರಾಪಂ ಮಾಜಿ ಅಧ್ಯಕ್ಷ ಮಂಜುನಾಥ ಬಿಳಿಯ ನಾಯ್ಕ, ಸಮಿತಿಯ ಉಪಾಧ್ಯಕ್ಷರಾದ ಜಿ. ಕೆ. ಹೆಗಡೆ, ಶಂಕರ ಗಣಪತಿ ನಾಯ್ಕ, ಕಾರ್ಯದರ್ಶಿ ಲಕ್ಷ್ಮೀ ಎನ್.ಭಟ್, ಪದಾಧಿಕಾರಿಗಳಾದ ಮಂಜುನಾಥ ಕೆ.ನಾಯ್ಕ, ಗಜಾನನ ಎನ್.ಹಳ್ಳೆರ, ಮಾರುತಿ ಎನ್.ನಾಯ್ಕ, ಮಂಜುನಾಥ ಎಸ್.ನಾಯ್ಕ, ಗಣೇಶ ಎಸ್.ನಾಯ್ಕ, ಗಜಾನನ ಎಚ್.ನಾಯ್ಕ ಮೊದಲಾದವರಿದ್ದರು.

ಧ್ಯಾನ ಎಲ್ಲ ರೋಗಗಳಿಗೆ ಶ್ರೇಷ್ಠ ಚಿಕಿತ್ಸೆ: ಡಾ. ಜಗದೀಶ ನಾಯ್ಕ



ಅಂಕೋಲಾದಲ್ಲಿ ಕಲಾಭಾರತಿ ಟ್ರಸ್ಟ್ ಆಶ್ರಯದಲ್ಲಿ ಹಮ್ಮಿಕೊಂಡ ಧ್ಯಾನ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿದ ಡಾ. ಜಗದೀಶ ನಾಯ್ಕ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಅಂಕೋಲಾ

ಒತ್ತಡದ ಇಂದಿನ ಬದುಕಿನ ನಡುವೆ ದಿನದಲ್ಲಿ ಒಂದು ಗಂಟೆಯಾದರೂ ಪ್ರತಿಯೊಬ್ಬರೂ ಧ್ಯಾನ ಮಾಡಬೇಕು ಎಂದು ತಾಲೂಕು ವೈದ್ಯಾಧಿಕಾರಿ ಡಾ. ಜಗದೀಶ ನಾಯ್ಕ ಕರೆ ನೀಡಿದರು.

ಕಲಾಭಾರತಿ ಟ್ರಸ್ಟ್ ಆಶ್ರಯದಲ್ಲಿ ಹಮ್ಮಿಕೊಂಡ 21 ದಿನಗಳ ಧ್ಯಾನ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮೆಡಿಕೇಶನ್ ಬದಲು ಮೆಡಿಟೇಶನ್ ಮಾಡಿ ಎಂದರು.

ಹಿರಿಯ ಪತ್ರಕರ್ತ ವಿಠ್ಠಲದಾಸ್ ಕಾಮತ ಮಾತನಾಡಿ, ಧ್ಯಾನ ಪ್ರತಿನಿತ್ಯ ನನಗೆ ಸಹಕಾರಿಯಾಗಿದೆ. ಇದರ ಸದುಪಯೋಗ ಎಲ್ಲರೂ ಮಾಡಿಕೊಳ್ಳಬೇಕು ಎಂದರು.

ನಿವೃತ್ತ ಶಿಕ್ಷಕ ಎಂ.ಎಂ. ಕರ್ಕಿಕರ್ ಅಧ್ಯಕ್ಷತೆ ವಹಿಸಿದ್ದರು.

ವರ್ಷಿಣಿ ಶೆಟ್ಟಿ ಪ್ರಾರ್ಥಿಸಿದರು. ಟ್ರಸ್ಟ್‌ನ ಅಧ್ಯಕ್ಷ ಪ್ರಶಾಂತ ಶೆಟ್ಟಿ ಸ್ವಾಗತಿಸಿದರು. ಧ್ಯಾನ ಸಾಧಕಿ ಸುಧಾ ಶೆಟ್ಟಿ ಪ್ರಾಸ್ತಾವಿಕ ಮಾತನಾಡಿದರು. ನಿತೀನ್ ನಾಯ್ಕ ವಂದಿಸಿದರು. ನಂತರದಲ್ಲಿ ಅಂಕೋಲಾದ ಪಿರಮಿಡ್ ಮಾಸ್ಟರ್ ಸುಧಾ ಶೆಟ್ಟಿ ಧ್ಯಾನ ತರಬೇತಿ ನೀಡಿದರು.

ತಲೆಮರೆಸಿಕೊಂಡಿದ್ದ ಆರೋಪಿಗೆ 33 ವರ್ಷಗಳ ಬಳಿಕ 5 ವರ್ಷ ಜೈಲು ಶಿಕ್ಷೆ

ಕಾರವಾರ: ಹಳೆಯ ದ್ವೇಷದ ಹಿನ್ನೆಲೆ ದೊಣ್ಣೆಯಿಂದ ಹೊಡೆದು ವ್ಯಕ್ತಿಯೊಬ್ಬನನ್ನು ಕೊಲೆ ಮಾಡಿದ್ದ 1993ರ ಹಳೆಯ ಪ್ರಕರಣದ ಆರೋಪಿಗೆ ಕಾರವಾರದ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು 5 ವರ್ಷಗಳ ಕಾರಾಗೃಹ ಶಿಕ್ಷೆ ಹಾಗೂ ₹7,000 ದಂಡ ವಿಧಿಸಿ ತೀರ್ಪು ನೀಡಿದೆ. ಹಳೆಯ ದ್ವೇಷದ ಹಿನ್ನೆಲೆ ಆರೋಪಿಗಳು ಗುಂಪುಗೂಡಿ ಪ್ರಶಾಂತ್ ಎಂಬ ವ್ಯಕ್ತಿಗೆ ದೊಣ್ಣೆಯಿಂದ ಹೊಡೆದು ಬರ್ಬರವಾಗಿ ಕೊಲೆ ಮಾಡಿದ್ದರು. ಈ ಕುರಿತು 1993ರಲ್ಲಿ ಚಿತ್ತಾಕುಲ ಪೊಲೀಸ್ ಠಾಣೆಯಲ್ಲಿ ಐಪಿಸಿ ಕಲಂ 143, 147, 149, 504, 302 ಅಡಿ ಪ್ರಕರಣ ದಾಖಲಾಗಿತ್ತು. ಅಂದಿನ ಕದ್ರಾ ವೃತ್ತದ ಸಿಪಿಐ ಆಗಿದ್ದ ಡಿ.ಕೆ. ನಿಕ್ಕಮ್ ಅವರು ತನಿಖೆ ನಡೆಸಿ, ಕಾರವಾರದ ಭಗತವಾಡಾ ಅಸ್ನೋಟಿ ನಿವಾಸಿ ದೀಲಿಪ ಶಾಂತಾ ತಳೇಕರ ಎಂಬಾತನ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರ ಸಲ್ಲಿಸಿದ್ದರು. ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ನಡೆಯುತ್ತಿದ್ದಾಗ ಆರೋಪಿ ದೀಲಿಪ ತಲೆಮರೆಸಿಕೊಂಡಿದ್ದ. ಹೀಗಾಗಿ ಆತನ ಪ್ರಕರಣವನ್ನು ಎಲ್.ಪಿ.ಸಿ ಎಂದು ಪರಿಗಣಿಸಲಾಗಿತ್ತು. ತರುವಾಯ, 16-04- 2021 ರಂದು ಚಿತ್ತಾಕುಲ ಪಿಎಸ್ಐ ಪ್ರವೀಣ್ ಕುಮಾರ್ ನೇತೃತ್ವದ ಪೊಲೀಸ್ ತಂಡವು ತಲೆಮರೆಸಿಕೊಂಡಿದ್ದ ಆರೋಪಿ ಪತ್ತೆಹಚ್ಚಿ, ನ್ಯಾಯಾಲಯಕ್ಕೆ ಹಾಜರು ಪಡಿಸಿತ್ತು. ಪ್ರಕರಣದ ಸುದೀರ್ಘ ವಿಚಾರಣೆ ನಡೆಸಿದ ಕಾರವಾರದ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು, ಆರೋಪಿಗೆ 5 ವರ್ಷ ಜೈಲು ಶಿಕ್ಷೆ ಹಾಗೂ ₹7 ಸಾವಿರ ದಂಡ ವಿಧಿಸಿ ಆದೇಶ ಹೊರಡಿಸಿದೆ. ಈ ಪ್ರಕರಣದಲ್ಲಿ ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ಸುನೀತಾ ನಾಗೇಕರ ವಾದ ಮಂಡಿಸಿದ್ದರು.

ಶಾಸ್ತ್ರಾಧ್ಯಯನ ಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿದ ಸ್ವರ್ಣವಲ್ಲಿ ಶ್ರೀ

• **ಕನ್ನಡಪ್ರಭ ವಾರ್ತೆ** ಶಿರಸಿ

ತಾಲೂಕಿನ ಶ್ರೀ ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನದ ಆಶ್ರಯದಲ್ಲಿ ನಡೆಯುತ್ತಿರುವ ಐದು ದಿನಗಳ ಶಾಸ್ತ್ರಾಧ್ಯಯನ ಗೋಷ್ಠಿ ಕಾರ್ಯಕ್ರಮವನ್ನು ಮಠದ ಕಿರಿಯ ಶ್ರೀ ಆನಂದಬೋಧೇಂದ್ರ ಸರಸ್ವತೀ ಮಹಾಸ್ವಾಮಿಗಳು ಉದ್ಘಾಟಿಸಿದರು.

ಗಂಗಾಧರೇಂದ್ರ ಸರಸ್ವತೀ ಮಹಾಸ್ವಾಮಿಗಳು ಹಾಗೂ ಕಿರಿಯ ಶ್ರೀಗಳ ಸಾನ್ನಿಧ್ಯದಲ್ಲಿ ಚಿಂತನಾ ಗೋಷ್ಠಿಗಳು ನಡೆಯುತ್ತಿವೆ.

ಗೋಷ್ಠಿಯಲ್ಲಿ ವ್ಯಾಕರಣ, ನ್ಯಾಯ, ಧರ್ಮಶಾಸ್ತ್ರ, ಯೋಗದರ್ಶನ, ಪೂರ್ವಮೀಮಾಂಸಾ, ಅಲಂಕಾರ, ಶ್ರೌತ, ಜ್ಯೋತಿಷ್ಯ ಹಾಗೂ ವೇದಾಂತ ಸೇರಿದಂತೆ ಒಂಬತ್ತು ಪ್ರಮುಖ ಶಾಸ್ತ್ರಗಳ ಕುರಿತಾಗಿ ಆಳವಾದ ಚರ್ಚೆಗಳು ಮತ್ತು ಪ್ರಬಂಧ ಮಂಡನೆ ನಡೆಯುತ್ತಿವೆ.

ವಿದ್ವಾನ್ ಸೂರ್ಯನಾರಾಯಣ ಭಟ್ ಹಿತ್ಲಳ್ಳಿ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಗೋಷ್ಠಿಯಲ್ಲಿ ವಿದ್ವಾನ್ ಉಮಾಕಾಂತ ಭಟ್ ಕೆರೆಕೈ, ಡಾ. ಮಹಾಬಲೇಶ್ವರ ಭಟ್ ಕಿಚ್ಚಿಕೇರಿ, ಡಾ. ಮಹೇಶ ಭಟ್ ಇಡಗುಂದಿ, ಡಾ. ಚಂದ್ರಶೇಖರ ಭಟ್ ಶೃಂಗೇರಿ ಸೇರಿದಂತೆ ನಾಡಿನ ಗಣ್ಯ ವಿದ್ವತ್ ಸಮೂಹ ಭಾಗವಹಿಸಿದೆ.

ಮೇ 7ರವರೆಗೆ ನಡೆಯಲಿರುವ ಈ ಶಾಸ್ತ್ರಾಧ್ಯಯನ ಗೋಷ್ಠಿಯು ಸಂಸ್ಕೃತ ಹಾಗೂ ಭಾರತೀಯ ಶಾಸ್ತ್ರ ಪರಂಪರೆಯ ಅಧ್ಯಯನಕ್ಕೆ ಉತ್ತೇಜನ ನೀಡುವ ಅಪೂರ್ವ ಜ್ಞಾನೋತ್ಸವವಾಗಿ ರೂಪುಗೊಂಡಿದೆ ಎಂಬುದು ವಿಶೇಷವಾಗಿದೆ.

ಕಾರ್ಮಿಕರ ಹಿತರಕ್ಷಣೆ ನಮ್ಮ ಆದ್ಯತೆ



ಶಿರಸಿಯಲ್ಲಿ ಕಾರ್ಮಿಕ ದಿನಾಚರಣೆ ಕಾರ್ಯಕ್ರಮವನ್ನು ಶಾಸಕ ಭೀಮಣ್ಣ ನಾಯ್ಕ ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಶಿರಸಿ

ಕಾರ್ಮಿಕರ ಹಿತರಕ್ಷಣೆ ನಮ್ಮ ಆದ್ಯತೆ. ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಅನನ್ಯವಾದುದು. ಬೆವರು ಸುರಿಸಿ ದುಡಿಯುವ ಪ್ರತಿಯೊಬ್ಬ ಕಾರ್ಮಿಕನಿಗೂ ಸಾಮಾಜಿಕ ಭದ್ರತೆ ಮತ್ತು ಗೌರವ ಸಿಗಬೇಕು ಎನ್ನುವುದು ಸರ್ಕಾರದ ಆಶಯವಾಗಿದೆ ಎಂದು ಶಾಸಕ ಭೀಮಣ್ಣ ನಾಯ್ಕ ಹೇಳಿದರು.

ನಗರದ ಕೈಗಾರಿಕಾ ಭವನದಲ್ಲಿ ಕರ್ನಾಟಕ ರಾಜ್ಯ ಕಟ್ಟಡ ನಿರ್ಮಾಣ ಮತ್ತು ಅಸಂಘಟಿತ ಕಾರ್ಮಿಕರ ಒಕ್ಕೂಟದ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಮಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಅಲ್ಲದೆ ಅಸಂಘಟಿತ ವಲಯದ ಕಾರ್ಮಿಕರು ಸರ್ಕಾರದ ಸೌಲಭ್ಯಗಳಿಂದ ವಂಚಿತರಾಗಬಾರದು. ಕಾರ್ಮಿಕ ಇಲಾಖೆಯ ಯೋಜನೆಗಳು ಕಟ್ಟಕಡೆಯ ವ್ಯಕ್ತಿಗೂ ತಲುಪುವಂತಾಗಲು ಸಂಘಟನೆಗಳು ಶ್ರಮಿಸಬೇಕು ಎಂದು ಕರೆ ನೀಡಿದರು.

ಕಾರ್ಮಿಕರ ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ವಿಮಾ ಸೌಲಭ್ಯಗಳ ಕುರಿತು ಮಾಹಿತಿ ನೀಡಿದ ಶಾಸಕರು, ಕಾರ್ಮಿಕ ಒಕ್ಕೂಟದ ಬೇಡಿಕೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸುವ ಭರವಸೆ ನೀಡಿದರು. ಕರ್ನಾಟಕ ರಾಜ್ಯ ಕಟ್ಟಡ ನಿರ್ಮಾಣ ಮತ್ತು ಅಸಂಘಟಿತ ಕಾರ್ಮಿಕರ ಒಕ್ಕೂಟದ ಪದಾಧಿಕಾರಿಗಳು, ಕಾರ್ಮಿಕರ ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಕುರಿತು ಶಾಸಕರಿಗೆ ಮನವಿ ಸಲ್ಲಿಸಿದರು. ಕಾರ್ಮಿಕ ಮುಖಂಡರು, ಒಕ್ಕೂಟದ ಪದಾಧಿಕಾರಿಗಳು ಹಾಗೂ ನೂರಾರು ಸಂಖ್ಯೆಯಲ್ಲಿ ಅಸಂಘಟಿತ ವಲಯದ ಕಾರ್ಮಿಕರು ಉಪಸ್ಥಿತರಿದ್ದರು.

ಉದ್ಘಾಟನೆ... ಮಾದರಿ ಶಾಲೆಯಲ್ಲಿ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪದಲ್ಲಿ ಪ್ರೌಢಶಾಲಾ ಮುಖ್ಯಾಧ್ಯಾಪಕಿ ಮುಕ್ತಾ

ಮಕ್ಕಳಲ್ಲಿ ಶಿಕ್ಷಣ, ಸಂಸ್ಕೃತಿಯ ಮೌಲ್ಯದ ಅರಿವು ಮೂಡಿಸಿ

• **ಕನ್ನಡಪ್ರಭ ವಾರ್ತೆ** ಯಲ್ಲಾಪುರ

ಮಕ್ಕಳಿಗೆ ನಿತ್ಯ ಜೀವನದಲ್ಲಿ ಜೀವನ ಶಿಕ್ಷಣ, ಸಂಸ್ಕಾರ, ಸಂಸ್ಕೃತಿಯ ಮೌಲ್ಯದ ಅರಿವನ್ನು ಮೂಡಿಸುತ್ತಿರಬೇಕು. ಇಂತಹ ಶಿಬಿರಗಳಿಂದ ಮಕ್ಕಳಲ್ಲಿ ಒಂದು ಹೊಸ ಚೈತನ್ಯ, ಸ್ಫೂರ್ತಿ ಲಭಿಸುತ್ತದೆ. ಅದನ್ನು ಮುಂದುವರೆಸಿಕೊಂಡು ಹೋಗುವ ಹೊಣೆ ಪಾಲಕರ ಮೇಲಿದೆ ಎಂದು ವಿಶ್ವದರ್ಶನ ಕನ್ನಡ ಮಾಧ್ಯಮ ಪ್ರೌಢಶಾಲಾ ಮುಖ್ಯಾಧ್ಯಾಪಕಿ ಮುಕ್ತಾ ಶಂಕರ ಹೇಳಿದರು.

ಭಾನುವಾರ ಪಟ್ಟಣದ ಮಾದರಿ ಹಿರಿಯ ಪ್ರಾಥಮಿಕ ಶಾಲಾ ಸಭಾಭವನದಲ್ಲಿ ರಂಗಸಹ್ಯಾದ್ರಿ, ಓಂಕಾರ ಯೋಗ ಕೇಂದ್ರ ಮತ್ತು ಮಾದರಿ ಶಾಲೆಗಳ ಸಹಯೋಗದಲ್ಲಿ ಹಮ್ಮಿಕೊಂಡ 20ನೇ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪಕ್ಕೆ ಚಾಲನೆ ನೀಡಿ ಮಾತನಾಡಿದರು.



ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ನಡೆಯಿತು.

ಸಂಕಲ್ಪ ಸೇವಾ ಸಂಸ್ಥೆಯ ಅಧ್ಯಕ್ಷ ಪ್ರಮೋದ ಹೆಗಡೆ ಬಹುಮಾನ ವಿತರಿಸಿ ಮಾತನಾಡಿ, ರಂಗ ಸಹ್ಯಾದ್ರಿಯ ಡಿ.ಎನ್. ಗಾಂವ್ಕರ ಒಬ್ಬ ಉತ್ತಮ ಸಂಘಟಕ, ಕಲಾ ತಪಸ್ವಿ ಎಂದರೂ ತಪ್ಪಾಗಲಾರದು. ಅವರ ತಂಡ ಅದ್ಭುತವಾಗಿ ಈ ಪುಟಾಣಿ ಮಕ್ಕಳಿಗೆ ಒಂದು ಹೊಸ ಕಲ್ಪನೆಯನ್ನು ನೀಡಿದೆ ಎಂದರು.

ಶಿಕ್ಷಕ ಸಣ್ಣಪ್ಪ ಭಾಗ್ವತ, ರಂಗಸಹ್ಯಾದ್ರಿ ಅಧ್ಯಕ್ಷ ಡಿ.ಎನ್. ಗಾಂವ್ಕರ ಮಾತನಾಡಿದರು.

ಎಸ್ಸೆಸ್ಸೆಲ್ಸಿಯಲ್ಲಿ ರಾಜ್ಯಕ್ಕೆ 4ನೇ ರ್‍ಯಾಂಕ್ ವಿಜೇತೆ ಸಮೃದ್ಧಿ ಸಣ್ಣಪ್ಪ ಭಾಗ್ವತ ಸನ್ಮಾನ ಸ್ವೀಕರಿಸಿ ಅನುಭವ ಹಂಚಿಕೊಂಡಳು. ಶಿಬಿರಾರ್ಥಿಗಳಾದ ನಿಹಿತಾ ಗಣಪತಿ ಬೋಳಗುಡ್ಡೆ, ನಿಧಿ ಸುಬ್ರಾಯ ಪೈ, ಭುವನ ಪಟಗಾರ, ಪ್ರತೀಕ್ಷಾ ಭಟ್ಟ ಅನುಭವ ಹಂಚಿಕೊಂಡರು. ಶಾಲಾ ಎಸ್.ಡಿ.ಎಂ.ಸಿ. ಸದಸ್ಯರಾದ ಗಣೇಶ ಪಂಡರಾಪುರ, ರಾಘವೇಂದ್ರ ತಳೇಕರ, ಸಂಪನ್ಮೂಲ ವ್ಯಕ್ತಿಗಳಾದ ಜಿ.ಎಂ. ತಾಂಡುರಾಯನ್, ಸುಮಂಗಲಾ ಜೋಶಿ, ಪರಮೇಶ್ವರ ನಾಯ್ಕ, ಪಾರ್ವತಿ ಕಟ್ಟಿಮನಿ, ಲಕ್ಷ್ಮೀ ಶಂಕರ ಭಟ್ಟ, ಸೋನು ಭಟ್ಟ, ಸುಬ್ರಾಯ ಭಟ್ಟ, ಗಾಯತ್ರಿ ಬೋಳಗುಡ್ಡೆ ಮುಂತಾದವರಿದ್ದರು.

ಪುದುಚೇರಿ, ಅಸ್ಸಾಂಗಳಲ್ಲೂ ಬಿಜೆಪಿ ಜಯಭೇರಿ ಬಾರಿಸಿದೆ. ಚುನಾವಣಾ ಆಯೋಗದ ಎಸ್.ಐ.ಆರ್. ಪ್ರಕ್ರಿಯೆಯಿಂದ ಬೀದಿಯ ಎಲ್ಲ ಅವ್ಯವಹಾರ ಬೆಳಕಿಗೆ ಬಂದಿದೆ.
• **ರೂಪಾಲಿ ನಾಯ್ಕ** ರಾಜ್ಯ ಬಿಜೆಪಿ ಉಪಾಧ್ಯಕ್ಷೆ

ಸುದ್ದಿ ಸಿಂಚನ

ಮುಂಡಗೋಡದಲ್ಲಿ ಕಾಂಗ್ರೆಸ್ ವಿಜಯೋತ್ಸವ

ಮುಂಡಗೋಡ: ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗಳ ಜೊತೆಗೆ ಕೇರಳ ರಾಜ್ಯದ ಚುನಾವಣಾ ಫಲಿತಾಂಶಗಳಲ್ಲಿ ಕಾಂಗ್ರೆಸ್ ಅಭೂತಪೂರ್ವ ಜಯ ಸಾಧಿಸಿದ ಹಿನ್ನೆಲೆ ಸೋಮವಾರ ಸಂಜೆ ಮುಂಡಗೋಡ ಬ್ಲಾಕ್ ಕಾಂಗ್ರೆಸ್ ವತಿಯಿಂದ ಪಟ್ಟಣದ ಶಿವಾಜಿ ಸರ್ಕಲ್‌ನಲ್ಲಿ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಲಾಯಿತು. ಈ ಸಂದರ್ಭ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣ ಹಿರೇಹಳ್ಳಿ, ಕೆಡಿಸಿಸಿ ಬ್ಯಾಂಕ್ ಸದಸ್ಯ ಎಚ್.ಎಂ. ನಾಯ್ಕ್, ಪಿ.ಎಲ್.ಡಿ., ಬ್ಯಾಂಕ್ ಅಧ್ಯಕ್ಷ ವೈ.ಪಿ. ಭುಜಂಗಿ, ಕೆಂಜೋಡಿ ಗಲಭಿ, ಗುಡ್ಡಪ್ಪ ಕಾತೂರ, ಧರ್ಮರಾಜ ನಡಗೇರಿ, ಪರಶುರಾಮ್ ತಹಶೀಲ್ದಾರ್, ಎಂ.ಎನ್. ದುಂಡಸಿ, ಮಂಜುನಾಥ್ ಕಟಗಿ ಮುಂತಾದವರಿದ್ದರು.

ಯಲ್ಲಾಪುರದಲ್ಲಿ ಕೈ ಕಾರ್ಯಕರ್ತರ ಸಂಭ್ರಮ

ಯಲ್ಲಾಪುರ: ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತವನ್ನು ಜನ ಬೆಂಬಲಿಸಿದ್ದಾರೆ ಎಂಬುದಕ್ಕೆ ಬಾಗಲಕೋಟೆ ಮತ್ತು ದಾವಣಗೆರೆ ಉಪಚುನಾವಣೆ ಸಾಕ್ಷಿಯಾಗಿದೆ. ಚುನಾವಣೆಯ ಪೂರ್ವ ಕೆಲ ಗೊಂದಲಗಳಿದ್ದರೂ ನಮ್ಮ ಪಕ್ಷದ ಅಭ್ಯರ್ಥಿಗಳು ವಿಜಯಶಾಲಿಯಾಗಿದ್ದಾರೆ ಎಂದು ಕೆಪಿಸಿಸಿ ಸದಸ್ಯ ವಿವೇಕ ಹೆಬ್ಬಾರ ಹೇಳಿದರು. ಸೋಮವಾರ ಪಟ್ಟಣದ ಅಂಬೇಡ್ಕರ್‌ವೃತ್ತದಲ್ಲಿ ಕಾಂಗ್ರೆಸ್ ವಿಜಯೋತ್ಸವದಲ್ಲಿ ಭಾಗವಹಿಸಿ, ಮಾತನಾಡಿದರು. ಪಕ್ಷದ ಕೇರಳದಲ್ಲೂ ಕಾಂಗ್ರೆಸ್ ಆಡಳಿತದ ಚುಕ್ಕಾಣಿ ಹಿಡಿದಿದೆ. ಈ ಮೂಲಕ ದೇಶದಲ್ಲಿ ಕಾಂಗ್ರೆಸ್ ಅಸ್ತಿತ್ವ ಉಳಿಸಿಕೊಳ್ಳುವಲ್ಲಿ ಸಫಲ ಆಗುತ್ತಿದೆ ಎಂಬ ಸಂದೇಶ ನೀಡಿದೆ ಎಂದರು. ಈ ಸಂದರ್ಭದಲ್ಲಿ ಪ್ರಮುಖರಾದ ಎನ್.ಕೆ. ಭಟ್ಟ ಮೆಣಸುಪಾಲ, ವಿಜಯ ಮಿರಾಶಿ, ಉಲ್ಲಾಸ ಶಾನಭಾಗ, ಪ್ರೇಮಾನಂದ ನಾಯ್ಕ, ಶಿರೀಷ ಪ್ರಭು, ಸತೀಶ ನಾಯ್ಕ, ಪೂಜಾ ನೇತ್ರೇಕರ, ಮಿಶ್ರತ್ ಖಾನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ವೃದ್ಧೆಯ ಮೇಲೆ ಚಿರತೆ ದಾಳಿ

ಜೊಯಿಡಾ: ರಾತ್ರಿ ಮೂತ್ರ ವಿಸರ್ಜನೆಗೆ ಹೊರ ಹೋಗಿದ್ದ ವೃದ್ಧೆಯ ಮೇಲೆ ಚಿರತೆಯೊಂದು ದಾಳಿ ಮಾಡಿ ಗಾಯಗೊಳಿಸಿದ ಘಟನೆ ತಾಲೂಕಿನ ಪಣಸೂಲಿ ಅರಣ್ಯ ವಲಯದ ಅವುರ್ಲಿ ಗ್ರಾಮದಲ್ಲಿ ಮಾಡಿದ ಘಟನೆ ಸೋಮವಾರ ನಡೆದಿದೆ. ಸುಶೀಲಾ ಶಾಂತಾರಾಮ್ ದೇವಿದಾಸ (70) ಗಾಯಾಳು. ಚಿರತೆ ದಾಳಿಯಿಂದ ಕಂಗಾಲಾದ ಮಹಿಳೆ ಕೂಗಿ ಮನೆಯವರನ್ನು ಎಬ್ಬಿಸಿದ್ದಾರೆ. ಅವರ ಕೂಗಿಗೆ ಚಿರತೆ ಓಡಿ ಹೋಗಿದೆ. ಕೂಡಲೇ ಅಕ್ಕಪಕ್ಕದವರು ಬಂದು ಅವರನ್ನು ಸಂತೈಸಿದ್ದಾರೆ. ಮಹಿಳೆಯ ತಲೆ ಮತ್ತು ದೇಹದ ಭಾಗಕ್ಕೆ ಚಿರತೆ ತರಚಿದ ಗಾಯವಾಗಿದೆ. ನಂತರ ಅವರನ್ನು ಜೋಯಿಡಾ ಆಸ್ಪತ್ರೆಗೆ ದಾಖಲಿಸಲಾಯಿತು. ಬಳಿಕ ಅಸ್ವಸ್ಥ ಮಹಿಳೆಯನ್ನು ಹೆಚ್ಚಿನ ಚಿಕಿತ್ಸೆಗಾಗಿ ಧಾರವಾಡದ ಎಸ್ ಡಿಎಂಗೆ ಕಳುಹಿಸಲಾಗಿದೆ. ಈ ಘಟನೆಯಿಂದ ಗ್ರಾಮಸ್ಥರು ಭಯಭೀತರಾಗಿದ್ದಾರೆ. ತಾಲೂಕಿನ ಅವುರ್ಲಿಯಲ್ಲಿ ಅರಣ್ಯ ಇಲಾಖೆಯಿಂದ ಚಿರತೆ ದಾಳಿಗೊಳಗಾದ ಮಹಿಳೆಯ ಮನೆಯ ಅಕ್ಕಪಕ್ಕದಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ಮಹಿಳೆಯ ಚಿಕಿತ್ಸೆ ವ್ಯವಸ್ಥೆಯನ್ನು ಅರಣ್ಯ ಇಲಾಖೆಯೇ ಮಾಡಲಿದೆ. ಚಿರತೆ ಬಗ್ಗೆ ನಿಗಾ ಇಡಲಾಗುತ್ತದೆ. ಸ್ಥಳೀಯರು ಹೆದರುವ ಅಗತ್ಯವಿಲ್ಲ ಎಂದು ವಲಯ ಅರಣ್ಯಾಧಿಕಾರಿ ಪಣಸೋಲಿಯ ರವಿಕಿರಣ ಸಂಪಗಾವಿ ತಿಳಿಸಿದ್ದಾರೆ.

ವೈದ್ಯ ಸಾವು: ತನಿಖೆ ನಡೆಸುವಂತೆ ಪತ್ನಿ ದೂರು

ಜೋಯಿಡಾ: ತಾಲೂಕಿನ ಡಿಗ್ಗಿ ಆಸ್ಪತ್ರೆಯ ವೈದ್ಯ ಲೆನ್ಸರ್‌ಲೋಬೊ ಸಾವು ಸಂಶಯಾಸ್ಪದವಾಗಿದ್ದು ತನಿಖೆ ನಡೆಸಿ ನ್ಯಾಯ ನೀಡಬೇಕೆಂದು ಅವರ ಪತ್ನಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಲೆನ್ಸರ್‌ಲೋಬೊ ಜೋಯಿಡಾದ ಇಬ್ರಾಹಿಂ ಎಂಬ ಗೆಳೆಯನೊಂದಿಗೆ



ಗೋವಾಕ್ಕೆ ಹೋಗಿ ಬಂದಾಗ ಆರೋಗ್ಯ ಸರಿ ಇರಲಿಲ್ಲ. ತಾವೇ ಸ್ವತಃ ಚಿಕಿತ್ಸೆ ಮಾಡಿಕೊಳ್ಳುತ್ತಿದ್ದರು. ಈ ಸಂದರ್ಭ ಊಟ ಕೂಡ ಮಾಡುತ್ತಿರಲಿಲ್ಲ. ಹೀಗಾಗಿ ಅಸ್ವಸ್ಥರಾಗಿ ಕಾಣುತ್ತಿದ್ದರು. ಕಳೆದ ಏ. 30ರಂದು ಚಿಕಿತ್ಸೆಗೆ ಸ್ಪಂದಿಸದೇ ಇದ್ದಾಗ ಅವರು ಸಂಜೆ 6.30ರ ವೇಳೆಗೆ ನಿತ್ರಾಣರಾದರು. ಆಗ ನಾನು ಅವರನ್ನು ಜೋಯಿಡಾ ಆಸ್ಪತ್ರೆಗೆ ಕರೆದುಕೊಂಡು ಹೋದೆ. ಆದರೆ ಆಗಲೇ ಅವರು ಸಾವನ್ನಪ್ಪಿದ್ದಾರೆ ಎಂದು ವೈದ್ಯರು ಹೇಳಿದ್ದರು ಎಂದು ದೂರಿನಲ್ಲಿ ಮೃತರ ಪತ್ನಿ ನಿಖಿತಾ ಲೋಬೋ ತಿಳಿಸಿದ್ದಾರೆ. ಕುಡಿತ, ಅನಾರೋಗ್ಯ, ವಿಷಾಹಾರ ಸೇವನೆಯೇ ಸಾವಿಗೆ ಕಾರಣವಾಗಿದ್ದು, ವೈದ್ಯರ ಜೊತೆ ಹೋದ ಗೆಳೆಯನ ಬಗ್ಗೆ ಸಂಶಯ ವ್ಯಕ್ತಪಡಿಸಿದ್ದು, ಘಟನೆಯ ಸಂಪೂರ್ಣ ತನಿಖೆ ನಡೆಸಿ ಸಾವಿಗೆ ನ್ಯಾಯ ನೀಡುವಂತೆ ಮನವಿ ಮಾಡಿದ್ದಾರೆ. ಜೋಯಿಡಾ ಪಿಎಸ್ಐ ಮಹೇಶ ಮಾಳಿ ಈ ಪ್ರಕರಣದ ತನಿಖೆ ಮಾಡುತ್ತಿದ್ದಾರೆ.



ಬಾಗಲಕೋಟೆ, ದಾವಣಗೆರೆ ಕ್ಷೇತ್ರಗಳ ಉಪಚುನಾವಣೆಜೊತೆಗೆ ಕೇರಳದ ಚುನಾವಣಾ ಫಲಿತಾಂಶಗಳಲ್ಲಿ ಕಾಂಗ್ರೆಸ್ ಜಯ ಸಾಧಿಸಿದ ಹಿನ್ನೆಲೆ ಮುಂಡಗೋಡ ಬ್ಲಾಕ್ ಕಾಂಗ್ರೆಸ್‌ನಿಂದ ಪಟ್ಟಣದ ಶಿವಾಜಿ ಸರ್ಕಲ್‌ನಲ್ಲಿ ಪಟಾಕಿ ಸಿಡಿಸಿ ವಿಜಯೋತ್ಸವ ಆಚರಿಸಲಾಯಿತು.



ಬಾಗಲಕೋಟೆ ಮತ್ತು ದಾವಣಗೆರೆ ಉಪಚುನಾವಣೆಯಲ್ಲಿ ಗೆಲುವು ಸಾಧಿಸಿದ ಹಿನ್ನೆಲೆ ಯಲ್ಲಾಪುರ ಪಟ್ಟಣದ ಅಂಬೇಡ್ಕರ್ ವೃತ್ತದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು. ಕೆಪಿಸಿಸಿ ಸದಸ್ಯ ವಿವೇಕ ಹೆಬ್ಬಾರ ಇತರರಿದ್ದರು.



ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ ವಿಧಾನಸಭೆ ಚುನಾವಣೆಗಳಲ್ಲಿ ಬಿಜೆಪಿ, ಎನ್‌ಡಿಎ ಮೈತ್ರಿಕೂಟ ಅಭೂತಪೂರ್ವ ಗೆಲುವು ದಾಖಲಿಸಿದ ಹಿನ್ನೆಲೆ ಕಾರವಾರ ನಗರದಲ್ಲಿ ನಡೆದ ವಿಜಯೋತ್ಸವದಲ್ಲಿ ರೂಪಾಲಿ ಎಸ್.ನಾಯ್ಕ ಸಂಭ್ರಮದಿಂದ ಪಾಲ್ಗೊಂಡರು.

ದೇಶದ್ರೋಹಕ್ಕೆ ಅವಕಾಶವಿಲ್ಲವೆಂದು ಜನ ತೋರಿಸಿದ್ದಾರೆ

ಪಂಚರಾಜ್ಯ ಚುನಾವಣೆಯ ಫಲಿತಾಂಶದ ವಿಜಯೋತ್ಸವದಲ್ಲಿ ರಾಜ್ಯ ಬಿಜೆಪಿ ಉಪಾಧ್ಯಕ್ಷೆ ರೂಪಾಲಿ ಎಸ್. ನಾಯ್ಕ ಹೇಳಿಕೆ



ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಬಿಜೆಪಿ ಮಂಡಲದಿಂದ ವಿಜಯೋತ್ಸವ ನಡೆಯಿತು.

• **ಕನ್ನಡಪ್ರಭ ವಾರ್ತೆ** ಯಲ್ಲಾಪುರ

ದೇಶದ್ರೋಹಕ್ಕೆ ಈ ದೇಶದಲ್ಲಿ ಅವಕಾಶವಿಲ್ಲ ಎಂಬುದನ್ನು ಪಶ್ಚಿಮ ಬಂಗಾಳದಲ್ಲಿ ಮತದಾರರು ಮಮತಾ ಬ್ಯಾನರ್ಜಿಗೆ ತೋರಿಸಿಕೊಟ್ಟಿದ್ದಾರೆ. ಮೋದಿ, ಅಮಿತ್ ಶಾ ನೇತೃತ್ವದಲ್ಲಿ ಹಿಂಸೆ, ಅಹಂಕಾರ ಇದಾವುದಕ್ಕೂ ಅವಕಾಶವಿಲ್ಲ ಎಂಬುದನ್ನು ತೋರಿಸಿಕೊಟ್ಟಿದ್ದಾರೆ ಎಂದು ರಾಜ್ಯ ಬಿಜೆಪಿ ಉಪಾಧ್ಯಕ್ಷೆ ರೂಪಾಲಿ ನಾಯ್ಕ ಹೇಳಿದರು.

ಸೋಮವಾರ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಬಿಜೆಪಿ ಮಂಡಲ ಹಮ್ಮಿಕೊಂಡ ಪಂಚರಾಜ್ಯ ಚುನಾವಣೆಯ ಫಲಿತಾಂಶದ ವಿಜಯೋತ್ಸವದಲ್ಲಿ ಮಾತನಾಡಿದರು.

ಪುದುಚೇರಿ, ಅಸ್ಸಾಂಗಳಲ್ಲೂ ಬಿಜೆಪಿ ಜಯಭೇರಿ ಬಾರಿಸಿದೆ. ಚುನಾವಣಾ ಆಯೋಗದ ಎಸ್.ಐ.ಆರ್. ಪ್ರಕ್ರಿಯೆಯಿಂದ ಬೀದಿಯ ಎಲ್ಲ ಅವ್ಯವಹಾರ ಬೆಳಕಿಗೆ ಬಂದಿದೆ. ಅಂತೆಯೇ ರಾಜ್ಯದಲ್ಲಿ ಎಸ್‌ಐಆರ್ ಪ್ರಾರಂಭಗೊಂಡಿದೆ. ಮುಂಬರುವ ದಿನಗಳಲ್ಲಿ ಬಿಜೆಪಿ ಅಧಿಕಾರಕ್ಕೇರುವುದು ಹಾಗೆಯೇ ಯಲ್ಲಾಪುರದಲ್ಲೂ ಕೂಡ ಬಿಜೆಪಿಯ ಅಭ್ಯರ್ಥಿಯೇ ಗೆಲುವು ಸಾಧಿಸಲಿದ್ದಾರೆ ಎಂದರು.

ಹಿರಿಯ ನಾಯಕ ಪ್ರಮೋದ ಹೆಗಡೆ, ರಾಜ್ಯ ಬಿಜೆಪಿ ವಕ್ತಾರ ಹರಿಪ್ರಕಾಶ ಕೋಣೆಮನೆ ಮಾತನಾಡಿದರು.

ಈ ಸಂದರ್ಭದಲ್ಲಿ ಮಂಡಳಾಧ್ಯಕ್ಷ ಪ್ರಸಾದ ಹೆಗಡೆ, ಪ್ರಮುಖರಾದ ಉಮೇಶ ಭಾಗ್ವತ, ವೆಂಕಟ್ರಮಣ ಬೆಳ್ಳಿ, ಗಣಪತಿ ಬೋಳಗುಡ್ಡೆ, ರವಿ ಕೈಟ್ಕರ್, ರಾಘವೇಂದ್ರ ಭಟ್ಟ, ರಾಮಚಂದ್ರ ಚಿಕ್ಯಾನಮನೆ, ರಜತ ಬದ್ದಿ, ಚಂದ್ರಕಲಾ ಭಟ್ಟ, ಶ್ರುತಿ ಹೆಗಡೆ ಸೇರಿದಂತೆ ಮತ್ತಿತರರಿದ್ದರು.

ಭಟ್ಕಳದಲ್ಲೂ ಬಿಜೆಪಿಯಿಂದ ವಿಜಯೋತ್ಸವ

• **ಕನ್ನಡಪ್ರಭ ವಾರ್ತೆ** ಭಟ್ಕಳ

ಪಂಚರಾಜ್ಯ ಚುನಾವಣೆಯಲ್ಲಿ ಬಿಜೆಪಿ ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ ರಾಜ್ಯದಲ್ಲಿ ಹೆಚ್ಚಿನ ಸ್ಥಾನ ಗಳಿಸಿ ಅಧಿಕಾರಕ್ಕೆ ಬಂದ ಹಿನ್ನೆಲೆ ಸ್ಥಳೀಯ ಬಿಜೆಪಿ ವತಿಯಿಂದ ಪಟ್ಟಣದ ಮುಖ್ಯವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಲಾಯಿತು.

ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಅಭೂತಪೂರ್ವ ಜಯ ದಾಖಲಿಸಿರುವುದು ಹೆಮ್ಮೆಯ ವಿಚಾರ. ಕೇಂದ್ರದ ಬಿಜೆಪಿ ಆಡಳಿತಕ್ಕೆ 3 ರಾಜ್ಯದ ಜನರು ಬೆಂಬಲಿಸಿದ್ದಾರೆ. ಮೂರು ರಾಜ್ಯದಲ್ಲಿ ಬಿಜೆಪಿ ಜಯಗಳಿಸಿ ಸರಕಾರ ರಚನೆ ಮಾಡುತ್ತಿರುವುದು ಬಿಜೆಪಿ ಕಾರ್ಯಕರ್ತರಲ್ಲಿ ಹುಮ್ಮಸ್ಸಿಗೆ ಕಾರಣವಾಗಿದೆ ಎಂದು ಬಿಜೆಪಿ ಮುಖಂಡರು ಸಂತಸ ವ್ಯಕ್ತಪಡಿಸಿದರು. ಬಿಜೆಪಿ ಮಂಡಲಾಧ್ಯಕ್ಷ ಲಕ್ಷ್ಮೀನಾರಾಯಣ ನಾಯ್ಕ, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಸುಬ್ರಾಯ ದೇವಡಿಗ, ಶ್ರೀಕಾಂತ ನಾಯ್ಕ, ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ಶಿವಾನಿ ಶಾಂತರಾಮ ಭಟ್ಕಳ, ಪ್ರಮುಖರಾದ ರಾಜೇಶ ನಾಯ್ಕ, ಮೋಹನ ನಾಯ್ಕ, ದಿನೇಶ ನಾಯ್ಕ, ವೆಂಕಟೇಶ ನಾಯ್ಕ, ಭಾಸ್ಕರ ದೈಮನೆ, ಕೇಶವ ನಾಯ್ಕ, ಮಂಜುನಾಥ ನಾಯ್ಕ ಚಿತ್ರಾಪುರ, ಶ್ರೀನಿವಾಸ ನಾಯ್ಕ ಮುಂತಾದವರಿದ್ದರು.



ಪಂಚರಾಜ್ಯ ಚುನಾವಣೆಗಳಲ್ಲಿ ಬಿಜೆಪಿ ಅಭೂತಪೂರ್ವ ಜಯಗಳಿಸಿರುವುದರಿಂದ ಭಟ್ಕಳ ಬಿಜೆಪಿಯಿಂದ ವಿಜಯೋತ್ಸವ ನಡೆಸಲಾಯಿತು.

ಮುಂಡಗೋಡದಲ್ಲಿ ಬಿಜೆಪಿ ಕಾರ್ಯಕರ್ತರ ಸಂಭ್ರಮಾಚರಣೆ

• **ಕನ್ನಡಪ್ರಭ ವಾರ್ತೆ** ಮುಂಡಗೋಡ

ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ಪುದುಚೇರಿ ಸೇರಿದಂತೆ ಮೂರು ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆ ಪಟ್ಟಣದ ಶಿವಾಜಿ ಸರ್ಕಲ್‌ನಲ್ಲಿ ಸೋಮವಾರ ಸಂಜೆ ಬಿಜೆಪಿ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದರು.



ಈ ಸಂದರ್ಭ ಬಿಜೆಪಿ ರಾಜ್ಯ ಉಪಾಧ್ಯಕ್ಷೆ ಮಾಜಿ ಶಾಸಕಿ ರೂಪಾಲಿ ನಾಯ್ಕ, ರಾಜ್ಯ ಮಾಧ್ಯಮ ವಕ್ತಾರ ಹರಿಪ್ರಕಾಶ್ ಕೋಣೆಮನೆ, ಮಂಡಲ ಅಧ್ಯಕ್ಷ ಮಂಜುನಾಥ್ ಪಾಟೀಲ್, ಜಿಲ್ಲಾ ಉಪಾಧ್ಯಕ್ಷ ಎಲ್.ಟಿ. ಪಾಟೀಲ್, ಅಶೋಕ್ ಚಲವಾದಿ, ಮಹೇಶ ಹೊಸಕೊಪ್ಪ ಮುಂತಾದವರಿದ್ದರು.

ಕ್ರಿಕೆಟ್ ಟೂರ್ನಿ: ಆರ್‌ಎಸ್‌ಡಬ್ಲ್ಯೂ ತಂಡಕ್ಕೆ ಚಾಂಪಿಯನ್ ಪಟ್ಟ

• **ಕನ್ನಡಪ್ರಭ ವಾರ್ತೆ** ಕಾರವಾರ

ನಗರದ ಮಾಲಾದೇವಿ ಮೈದಾನದಲ್ಲಿ ಎಲ್ ಆ್ಯಂಡ್ ಟಿ ಪ್ರಾಜೆಕ್ಟ್ ಸೀಬರ್ಡ್ ಎಂಡಬ್ಲ್ಯುಸಿ-04 ವತಿಯಿಂದ ಆಯೋಜಿಸಲಾಗಿದ್ದ ಅಂತರ ವಿಭಾಗೀಯ ಕ್ರಿಕೆಟ್ ಟೂರ್ನಿ-2026 ಭಾನುವಾರ ಯಶಸ್ವಿಯಾಗಿ ಜರುಗಿತು. ಸಿಬ್ಬಂದಿ, ಕಾರ್ಮಿಕರು ಮತ್ತು ಕ್ಲೈಂಟ್ ಪ್ರತಿನಿಧಿಗಳ ಕ್ಷೇಮಾಭಿವೃದ್ಧಿ ಹಾಗೂ ಕ್ರೀಡಾ ಮನೋಭಾವವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಹಮ್ಮಿಕೊಳ್ಳಲಾಗಿದ್ದ ಈ ಕ್ರೀಡಾಕೂಟವು ರೋಚಕವಾಗಿ ಮುಕ್ತಾಯಗೊಂಡಿತು.

ಈ ಟೂರ್ನಿಯಲ್ಲಿ ಸಂಸ್ಥೆಯ ವಿವಿಧ ವಿಭಾಗಗಳನ್ನು ಪ್ರತಿನಿಧಿಸುವ ಒಟ್ಟು 6 ತಂಡ ಪಾಲ್ಗೊಂಡಿದ್ದವು. ಮೈದಾನದಲ್ಲಿ ಸಿಬ್ಬಂದಿ ಕ್ರೀಡಾ ಸ್ಫೂರ್ತಿಯೊಂದಿಗೆ ಬ್ಯಾಟ್ ಮತ್ತು ಬಾಲ್ ಮೂಲಕ ಮಿಂಚಿದರು.

ಕೇವಲ ಕ್ರೀಡಾಪಟುಗಳಷ್ಟೇ ಅಲ್ಲದೆ, ಎಲ್ ಆ್ಯಂಡ್ ಟಿ ಸಂಸ್ಥೆಯ ಕಾರ್ಮಿಕರು ಹಾಗೂ ಕ್ಲೈಂಟ್ ಪ್ರತಿನಿಧಿಗಳು ತಮ್ಮ ಕುಟುಂಬದವರೊಂದಿಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕ್ರೀಡಾಕೂಟಕ್ಕೆ ಉತ್ಸಾಹ ತಂದರು.

ಟೂರ್ನಿಯ ಅತ್ಯಂತ ಕುತೂಹಲಕಾರಿ ಫೈನಲ್ ಪಂದ್ಯದಲ್ಲಿ ಎಲ್ ಆ್ಯಂಡ್ ಟಿ ಆರ್‌ಎಸ್‌ಡಬ್ಲ್ಯೂ ತಂಡ ಮತ್ತು ಎಲ್ ಆ್ಯಂಡ್ ಟಿ ಸರ್ವಿಸ್ ವಿಭಾಗದ ತಂಡಗಳು ಮುಖಾಮುಖಿಯಾಗಿದ್ದವು. ಉಭಯ ತಂಡಗಳ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿತಾದರೂ, ಅತ್ಯುತ್ತಮ ಪ್ರದರ್ಶನ ತೋರಿದ ಎಲ್ ಆ್ಯಂಡ್ ಟಿ ಆರ್‌ಎಸ್‌ಡಬ್ಲ್ಯೂ ತಂಡವು ಎದುರಾಳಿಯನ್ನು ಮಣಿಸಿ ಚಾಂಪಿಯನ್ ಪಟ್ಟವನ್ನು ಅಲಂಕರಿಸಿತು. ಎಲ್ ಆ್ಯಂಡ್ ಟಿ ಸರ್ವಿಸ್ ವಿಭಾಗವು ರನ್ನರ್‌ಅಪ್ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿತು.

ವಿಜೇತ ಹಾಗೂ ರನ್ನರ್‌ಅಪ್ ತಂಡಗಳಿಗೆ ಜನಶಕ್ತಿ ವೇದಿಕೆ ಉತ್ತರ ಕನ್ನಡದ ಅಧ್ಯಕ್ಷರು ಹಾಗೂ ಸಾಮಾಜಿಕ ಕಾರ್ಯಕರ್ತ ಮಾಧವ ನಾಯಕ ಬಹುಮಾನ ವಿತರಿಸಿ ಸನ್ಮಾನಿಸಿದರು.



ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಎಲ್ ಆ್ಯಂಡ್ ಟಿ ಪ್ರಾಜೆಕ್ಟ್ ಡೈರೆಕ್ಟರ್ ಪಿ. ವಿಜಯ್, ಎಇಕಾಮ್ ಸಂಸ್ಥೆಯ ರೆಸಿಡೆಂಟ್ ಎಂಜಿನಿಯರ್ ಜೆ.ರಾಜದುರೈ, ನಿವೃತ್ತ ಲೆಫ್ಟಿನೆಂಟ್ ಕಮಾಂಡರ್ ಹಿರೇಮಠ ಭದ್ರಯ್ಯ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಪರೀಕ್ಷಾ ವೇಳೆ ಜನಿವಾರ, ಮಂಗಳಸೂತ್ರ ತೆಗೆಸುವುದು ನಿಲ್ಲಲಿ

ಹಳಿಯಾಳದಲ್ಲಿ ತಾಲೂಕಾಡಳಿತದ ಮೂಲಕ ರಾಜ್ಯ ಸರ್ಕಾರಕ್ಕೆ ಹಿಂದೂ ಜನಜಾಗೃತಿ ಸಮಿತಿ ಮನವಿ

• **ಕನ್ನಡಪ್ರಭ ವಾರ್ತೆ** ಹಳಿಯಾಳ

ಸಿಇಟಿ ಕೇಂದ್ರಗಳಲ್ಲಿ ಹಿಂದೂ ವಿದ್ಯಾರ್ಥಿಗಳ ಜನಿವಾರವನ್ನು ಬಲವಂತವಾಗಿ ತೆಗಿಸುವುದು ಹಾಗೂ ವಿವಾಹಿತೆಯರ ಮಂಗಳಸೂತ್ರ, ಕಾಲುಂಗುರ, ಮೂಗುತಿ, ಕಿವಿಯೋಲೆ, ಕೈದಾರ ಮುಂತಾದ ಧಾರ್ಮಿಕ ವಸ್ತು ತೆಗೆಯಲು ಒತ್ತಾಯಿಸುವ ಅಸಂವಿಧಾನಿಕ ಕ್ರಮಗಳನ್ನು ತಕ್ಷಣ ನಿಲ್ಲಿಸಬೇಕು ಎಂದು ಒತ್ತಾಯಿಸಿ ಹಿಂದೂ ಜನಜಾಗೃತಿ ಸಮಿತಿ ಸೋಮವಾರ ಹಳಿಯಾಳದಲ್ಲಿ ತಾಲೂಕಾಡಳಿತದ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿತು.

ಕಳೆದ ತಿಂಗಳು ರಾಜ್ಯದಲ್ಲಿ ನಡೆದ ಸಿಇಟಿ ಪರೀಕ್ಷಾ ಸಮಯದಲ್ಲಿ ಬೆಂಗಳೂರಿನ ಮಡಿವಾಳದಲ್ಲಿರುವ ಕೇಂದ್ರದಲ್ಲಿ ವಿದ್ಯಾರ್ಥಿಗಳ ತಪಾಸಣೆ ನೆಪದಲ್ಲಿ ಜನಿವಾರವನ್ನು ಬಲವಂತವಾಗಿ ತೆಗೆಸಿದ ಘಟನೆ ಖಂಡನೀಯ. ಜನಿವಾರ ತೆಗೆಯಲು ನಿರಾಕರಿಸಿದ ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರ ಪ್ರವೇಶ ನಿರಾಕರಿಸುವ ಬೆದರಿಕೆ ಹಾಕಿ, ಕೆಲವು ವಿದ್ಯಾರ್ಥಿಗಳ ಜನಿವಾರವನ್ನು ಸಿಬ್ಬಂದಿಗಳೇ ತೆಗೆದು ಕಸದ ಬುಟ್ಟಿಗೆ ಎಸೆದು ಹಿಂದೂ ಸಮಾಜದ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟು ಮಾಡಲಾಗಿದೆ, ಹೀಗೆ ಬಲವಂತವಾಗಿ ತೆಗೆಯಿಸುವ ಕೃತ್ಯವೂ ಧಾರ್ಮಿಕ ಸ್ವಾತಂತ್ರ್ಯದ ಮೇಲೆ ನಡೆಸಿದ ನೇರ ದಾಳಿಯಾಗಿದೆ ಎಂದು ಮನವಿಯಲ್ಲಿ ಆಕ್ರೋಶ ವ್ಯಕ್ತಪಡಿಸಲಾಗಿದೆ.

ಕಳೆದ ವರ್ಷವೂ ಬೀದರ, ಶಿವಮೊಗ್ಗ ಸೇರಿದಂತೆ ಹಲವೆಡೆ ಇಂತಹುವುದೇ ಘಟನೆಗಳು ನಡೆದಾಗ, ಕರ್ನಾಟಕ ಉಚ್ಚ ನ್ಯಾಯಾಲಯವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಸರ್ಕಾರ ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ನೋಟಿಸ್ ಜಾರಿ ಮಾಡಿತ್ತು. ಆದರೂ ಈ ವರ್ಷವೂ ಅಂತಹ ಘಟನೆ ಮರುಕಳಿಸಿರುವುದು ಆಡಳಿತ ವ್ಯವಸ್ಥೆಯ ನಿರ್ಲಕ್ಷ್ಯವನ್ನು ಎತ್ತಿ ತೋರಿಸುತ್ತದೆ ಎಂದು ಟೀಕಿಸಿದ್ದಾರೆ.

ಹಿಂದೂ ಜನಾಗೃತಿ ಸಮಿತಿಯ ಮುಖ್ಯಸ್ಥ ವಿಠೋಭಾ ಮಾಳ್ಸೇಕರ್, ಶಂಕರ ರೇಣಕೆ, ವಿನೋಧ ಘಿಂಡೇ, ರಾಘವೇಂದ್ರ ನಾಯಕ್, ಮಂಜುನಾಥ ಮೊರೆ, ರಾಘವೇಂದ್ರ ಚಲವಾದಿ, ಎಸ್.ಎಂ. ಬಾಳೆಕುಂದ್ರಿ, ಶಿವರಾಯ ಮಲ್ಲಪ್ಪ, ಗಣಪತಿ ಕುಂದೇಕರ, ರಾಜು ವಾಲೇಕರ್, ಸುಧಾ ಶೆಟ್ಟಿ, ತಾರಾ ಶೆಟ್ಟಿ, ಪೂಜಾ ಧೂಳಿ ಹಾಗೂ ಇತರರಿದ್ದರು.



ತಾಲೂಕಾಡಳಿತದ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿತು.

ತಾಲೂಕಾ ಮಟ್ಟದಲ್ಲಿ ಮೊದಲ 10 ಸ್ಥಾನ ಪಡೆದ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಸನ್ಮಾನ



ತಾಲೂಕು ಮಟ್ಟದಲ್ಲಿ ಮೊದಲ10 ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು.

• **ಕನ್ನಡಪ್ರಭ ವಾರ್ತೆ** ಅಂಕೋಲಾ

2025-26ನೇ ಶೈಕ್ಷಣಿಕ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಅತಿಹೆಚ್ಚು ಅಂಕ ಗಳಿಸಿ ತಾಲೂಕು ಮಟ್ಟದಲ್ಲಿ ಮೊದಲ 10 ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯ ಅಂಕೋಲಾ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಎಸ್.ಎಸ್.ಎಲ್.ಸಿ.ಯಲ್ಲಿ ತಾಲೂಕಿಗೆ ಪ್ರಥಮ 10 ಸ್ಥಾನ ಪಡೆದ ವಿದ್ಯಾರ್ಥಿಗಳಾದ ನಂದೀಶ ರಾಜು ನಾಯ್ಕ, ಪುರುಷೋತ್ತಮ ವಿನಾಯಕ ಭಟ್, ರವೀಶ ನಿತೇಶ ನಾಯ್ಕ, ಸಮೃದ್ಧಿ ಮಧುಕರ ನಾಯ್ಕ, ಅವನಿ ಬೀರಣ್ಣ ನಾಯಕ, ಸ್ವೀಕಾರ ಅರುಣ ನಾಯ್ಕ, ಬಶೀರ ಮೈನುದ್ದೀನ್ ಖಾನ್, ಮೌಲ್ಯ ಮಹೇಶ ನಾಯ್ಕ, ಶ್ರೇಯಾ ಅಶೋಕ ನಾಯ್ಕ, ಅಭಿಷೇಕ ರವೀಶ ನಾಯಕ, ಸನಾ ನಾಗರಾಜ ಗಾಂವಕರ, ನೇಸರ ರಾಜೇಶ ನಾಯ್ಕ ಅವರನ್ನು ಗೌರವಿಸಲಾಯಿತು.

ಬಳಿಕ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಲಲಕ್ಷ್ಮೀ ಪಾಟೀಲ ಮಾತನಾಡಿ, ಎಲ್ಲ ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ಸಾಧನೆ ಜೊತೆಗೆ ಉನ್ನತ ನೈತಿಕ ಮೌಲ್ಯ ಬೆಳೆಸಿಕೊಂಡು ದೇಶದ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳುವಂತಾಗಲಿ ಎಂದರು.

ಈ ಸಂದರ್ಭದಲ್ಲಿ ತಾಲೂಕಾ ದೈಹಿಕ ಶಿಕ್ಷಣ ಪರಿವೀಕ್ಷಕ ಮಂಜುನಾಥ ನಾಯಕ, ಬಿಆರ್‌ಸಿ ಪ್ರಭಾರ ಸಮನ್ವಯಾಧಿಕಾರಿ ದೇವರಾಯ ನಾಯಕ, ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಜಯಶ್ರೀ ಎ.ಪಿ., ಶಿಕ್ಷಣ ಸಂಯೋಜಕ ನದೀಮ ಶೇಖ, ಬಿ.ಆರ್.ಪಿ ಸಂಧ್ಯಾ ಹಾಗೂ ಪಾಲಕ-ಪೋಷಕರು ಉಪಸ್ಥಿತರಿದ್ದರು.

ಸಭೆ... ಯಡಿಯೂರಪ್ಪ ಅಭಿಮಾನೋತ್ಸವದ ಕುರಿತು ನಡೆದ ಪೂರ್ವಭಾವಿ ಸಭೆಯಲ್ಲಿ ರೂಪಾಲಿ ನಾಯ್ಕ

ಅಭಿಮಾನೋತ್ಸವ ಅಭೂತಪೂರ್ವವಾಗಿಸೋಣ

• **ಕನ್ನಡಪ್ರಭ ವಾರ್ತೆ** ಕಾರವಾರ

ಬಿಜೆಪಿಯನ್ನು ತಳಮಟ್ಟದಿಂದ ಸಂಘಟಿಸಿ ರಾಜ್ಯದಲ್ಲಿ ಅಧಿಕಾರಕ್ಕೆ ತರುವಲ್ಲಿ ಅಮೂಲ್ಯ ಕೊಡುಗೆ ನೀಡಿದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಭಿಮಾನೋತ್ಸವವನ್ನು ಅಭೂತಪೂರ್ವವಾಗಿಸೋಣ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷೆ, ಕಾರವಾರ ಅಂಕೋಲಾ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕಿ ರೂಪಾಲಿ ಎಸ್.ನಾಯ್ಕ ತಿಳಿಸಿದರು.

ಮಾಜಿ ಮುಖ್ಯಮಂತ್ರಿ, ರೈತಬಂಧು ಬಿ.ಎಸ್. ಯಡಿಯೂರಪ್ಪ ಅವರ 50 ವರ್ಷದ ರಾಜಕೀಯ ಜೀವನದ ಹಿನ್ನೆಲೆ ಚಿತ್ರದುರ್ಗದಲ್ಲಿ ಮೇ 9ರಂದು ನಡೆಯಲಿರುವ ಯಡಿಯೂರಪ್ಪ ಅಭಿಮಾನೋತ್ಸವದ ಕುರಿತು ಹಳಿಯಾಳ, ಮುಂಡಗೋಡ ಹಾಗೂ ಯಲ್ಲಾಪುರದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಬಿ.ಎಸ್. ಯಡಿಯೂರಪ್ಪ ಈ ನಾಡಿನ ಒಂದು ಶಕ್ತಿ. ಪಕ್ಷಕ್ಕಾಗಿ ಅವಿರತವಾಗಿ ಅರ್ಧಶತಮಾನದಷ್ಟು ಕಾಲ ದುಡಿದ ಮಹಾನ್ ನಾಯಕರು. ರೈತರು, ಬಡವರು, ಮೀನುಗಾರರು, ಮಹಿಳೆಯರು, ದೀನ ದಲಿತರು ಹೀಗೆ ಎಲ್ಲ ವರ್ಗದವರ ಅಭಿವೃದ್ಧಿಗಾಗಿ ಜನಪರ ಯೋಜನೆಗಳನ್ನು ಕಾರ್ಯಕ್ರಮ ಜಾರಿಗೊಳಿಸಿದ್ದಾರೆ. ಅವರು ನಾಡಿಗಾಗಿ, ಪಕ್ಷಕ್ಕಾಗಿ ನೀಡಿದ ಕೊಡುಗೆ ಹಿನ್ನೆಲೆ ಚಿತ್ರದುರ್ಗದಲ್ಲಿ ಮೇ 9ರಂದು ಯಡಿಯೂರಪ್ಪ ಅಭಿಮಾನೋತ್ಸವವನ್ನು ಏರ್ಪಡಿಸಲಾಗಿದೆ. ಈ ಕಾರ್ಯಕ್ರಮವನ್ನು ಐತಿಹಾಸಿಕವಾಗಿಸೋಣ. ನಮ್ಮ ಜಿಲ್ಲೆಯಿಂದ ಅತಿ ಹೆಚ್ಚು ಜನರು ಸ್ವಇಚ್ಛೆಯಿಂದ ಪಾಲ್ಗೊಳ್ಳುವ ಮೂಲಕ ಸಮಾರಂಭಕ್ಕೆ ಮೆರುಗು ತರೋಣ ಎಂದು ಮನವಿ ಮಾಡಿದರು.

ಮಾಜಿ ಶಾಸಕ ಸುನೀಲ ಹೆಗಡೆ, ರಾಜ್ಯ ವಕ್ತಾರ ಹರಿಪ್ರಕಾಶ್ ಕೋಣೆಮನೆ, ಪ್ರಮುಖರಾದ ಶ್ರೀಕಾಂತ ಘೋಟ್ನೇಕರ, ಮಂಗೇಶ ದೇಶಪಾಂಡೆ, ಶಿವಾಜಿ ನರ್ಸಾನಿ, ಎಲ್.ಟಿ. ಪಾಟೀಲ್, ಅಶೋಕ ಛಲವಾದಿ, ಮಂಜುನಾಥ ಪಾಟೀಲ ಮೊದಲಾದವರಿದ್ದರು.

ವಿಜಯೋತ್ಸವ: ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿ ವಿಧಾನಸಭೆ ಚುನಾವಣೆಗಳಲ್ಲಿ ಬಿಜೆಪಿ, ಎನ್‌ಡಿಎ ಮೈತ್ರಿಕೂಟ ಅಭೂತಪೂರ್ವ ಗೆಲುವು ದಾಖಲಿಸಿದ ಹಿನ್ನೆಲೆ ನಡೆದ ವಿಜಯೋತ್ಸವದಲ್ಲಿ ರೂಪಾಲಿ ಎಸ್. ನಾಯ್ಕ ಸಂಭ್ರಮದಿಂದ ಪಾಲ್ಗೊಂಡರು.



ಪೂರ್ವಭಾವಿ ಸಭೆಯಲ್ಲಿ ಮಾಜಿ ಶಾಸಕಿ ರೂಪಾಲಿ ಎಸ್.ನಾಯ್ಕ ಮಾತನಾಡಿದರು.

- ಬಿ.ಎಸ್. ಯಡಿಯೂರಪ್ಪ ಈ ನಾಡಿನ ಒಂದು ಶಕ್ತಿ. ಪಕ್ಷಕ್ಕಾಗಿ ಅವಿರತವಾಗಿ ಅರ್ಧಶತಮಾನದಷ್ಟು ಕಾಲ ದುಡಿದ ಮಹಾನ್ ನಾಯಕರು.
- ರೈತರು, ಬಡವರು, ಮೀನುಗಾರರು, ಮಹಿಳೆಯರು, ದೀನ ದಲಿತರು ಹೀಗೆ ಎಲ್ಲ ವರ್ಗದವರ ಅಭಿವೃದ್ಧಿಗಾಗಿ ಜನಪರ ಯೋಜನೆ ಜಾರಿಗೊಳಿಸಿದ್ದಾರೆ.

ಹಣದ ಆಸೆಗಾಗಿ ಬೌದ್ಧ ಸನ್ಯಾಸಿ ಕೊಲೆ

• **ಕನ್ನಡಪ್ರಭ ವಾರ್ತೆ** ಧಾರವಾಡ

ಮುಂಡಗೋಡ ಮೂಲದ ಬೌದ್ಧ ಸನ್ಯಾಸಿಯ ಕೊಲೆ ಪ್ರಕರಣವನ್ನು ಗ್ರಾಮೀಣ ಠಾಣೆಯ ಪೊಲೀಸರು ಬೇಧಿಸಿದ್ದು, ಐವರು ಆರೋಪಿಗಳ ಪೈಕಿ 18 ವರ್ಷದ ಯುವಕ ಸೇರಿದಂತೆ ಮೂವರನ್ನು ಬಂಧಿಸಲಾಗಿದೆ.

ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ತಟ್ಟೇಹಳ್ಳಿಯ ಬೌದ್ಧ ಸನ್ಯಾಸಿ ತಾಶಿ ಧೊಂದೂಪ (40) ಶವ ಏ. 28ರಂದು ಗ್ರಾಮೀಣ ಠಾಣೆ ವ್ಯಾಪ್ತಿಯ ಇಲ್ಲಿಯ ಬೈಪಾಸ್‌ನ ಹಳಿಯಾಳ ರಸ್ತೆ ಸೇತುವೆ ಕೆಳಗೆ ಪತ್ತೆಯಾಗಿತ್ತು. ಇದು ಕೊಲೆ ಎಂದು ಗೊತ್ತಾದ ಬಳಿಕ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾ ಪೊಲೀಸರು 8 ತಂಡ ರಚಿಸಿ ವಾರದೊಳಗೆ ಆರೋಪಿಗಳನ್ನು ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಮಾಹಿತಿ ನೀಡಿದರು.

ಆರೋಪಿಗಳಿವರು: ಸಂಕೇತ ಸತ್ಯಪ್ಪ ಯಾದವ (24), ವೈಭವ ಮಾರುತಿ ಚವ್ಹಾಣ (30) ಹಾಗೂ ಓರ್ವ ಅಪ್ರಾಪ್ತ ಕೊಲೆ ಆರೋಪಿಗಳಾಗಿದ್ದು, ಇನ್ನೂ ಇಬ್ಬರು ಆರೋಪಿಗಳ ಪತ್ತೆಗೆ ಜಾಲ ಬೀಸಲಾಗಿದೆ.

ಎಲ್ಲ ಆರೋಪಿಗಳು ಕೊಲ್ಲಾಪೂರ ಮೂಲದವರಾಗಿದ್ದು, ಹಣಕ್ಕಾಗಿ ಈ ದುಷ್ಕೃತ್ಯ ಎಸಗಿದ್ದಾರೆ. ಕಬ್ಬು ಕಟಾವು ಸೇರಿ ಬೇರೆ ಬೇರೆ ಕೆಲಸಕ್ಕಾಗಿ ಈ ಮುಂಚೆ ಆಗಾಗ ಮುಂಡಗೋಡಕ್ಕೆ ಬರುತ್ತಿದ್ದರು. ಮುಂಡಗೋಡ ಸ್ಥಳದ ಪರಿಚಯವಿತ್ತು. ಹಣದ ಅವಶ್ಯಕತೆ ಆರೋಪಿಗಳಿಗೆ ಹೆಚ್ಚಿದ್ದ ಕಾರಣ ಏ. 28ರಂದು ಕೊಲ್ಲಾಪುರದಿಂದ ಕಾರಿನಲ್ಲಿ ಬಂದಿದ್ದಾರೆ. ಮುಂಡಗೋಡ ಕ್ಯಾಂಪ್‌ನಲ್ಲಿ ಅಂದು ಮೂವರ ಮೇಲೆ ಹಲ್ಲೆ ನಡೆಸಿ ಹಣಕ್ಕಾಗಿ ಬೇಡಿಕೆ ಇಟ್ಟಿದ್ದಾರೆ. ವಿಫಲ ಯತ್ನವಾದ ಬಳಿಕ ಕೊಲೆಯಾದ ತಾಶಿ ದೊಂದೊಪ ಅವರನ್ನು ಅಪಹರಿಸಿ ಹಣ ಕೇಳಿದ್ದಾರೆ.

ಈ ಸಂದರ್ಭ ಕೈಕಾಲು ಕಟ್ಟಿ ತೀವ್ರವಾಗಿ ಹಲ್ಲೆ ನಡೆಸಿದಾಗ ತಾಶಿ ಅವರ ಮೂಗಿಗೆ ಬಲವಾಗಿ ಪೆಟ್ಟು ಬಿದ್ದು ಉಸಿರಾಟ ಸಮಸ್ಯೆಯಿಂದ ಕಾರಿನಲ್ಲಿಯೇ ತಾಶಿ ಮೃತಪಟ್ಟಿದ್ದಾರೆ.

ಸಿಸಿ ಕ್ಯಾಮೆರಾ ಪರಿಶೀಲನೆ: ಮುಂಡಗೋಡದಿಂದ ಶವವನ್ನು ಕಾರಿನಲ್ಲಿಯೇ ತಂದಿರುವ ಆರೋಪಿಗಳು ಹಳಿಯಾಳ ಸೇತುವೆ ಬಳಿ ಎಸೆದು ಬೈಪಾಸ್ ಮೂಲಕ ಕೊಲ್ಲಾಪೂರಕ್ಕೆ ಹೋಗಿದ್ದಾರೆ. ಆರೋಪಿಗಳನ್ನು ಇಷ್ಟು ಶೀಘ್ರ ಪತ್ತೆ ಮಾಡಲು ಅವರು ಬಳಸಿದ ಸಿಎನ್‌ಜಿ ಕಾರು ಪ್ರಮುಖ ಪಾತ್ರ ವಹಿಸಿದೆ. ಮುಂಡಗೋಡದಿಂದ ಕೊಲ್ಲಾಪೂರ ವರೆಗೆ ಸುಮಾರು 30ಕ್ಕೂ ಹೆಚ್ಚು ಸಿಸಿ ಕ್ಯಾಮೆರಾ ಪರಿಶೀಲನೆ ಮಾಡಿ ಕೊನೆಗೆ ಆರೋಪಿಗಳನ್ನು ಪತ್ತೆ ಹಚ್ಚಲಾಯಿತು. ಪರಿಶೀಲನೆ ವೇಳೆ ಕಾರು ಅಸ್ಪಷ್ಟವಾಗಿ ಪತ್ತೆಯಾಗಿತ್ತು. ಆದರೆ, ಆರೋಪಿಗಳು ಯಾರೆಂದು ಗೊತ್ತಾಗಿರಲಿಲ್ಲ. ಸಾಮಾನ್ಯವಾಗಿ ಕಾರುಗಳಿಗೆ ಸಿಎನ್‌ಜಿ ಹಾಕಿಸಿಕೊಳ್ಳುವಾಗ ಕಾರಿನಲ್ಲಿದ್ದ ಎಲ್ಲರನ್ನು ಇಳಿಸಲಾಗುತ್ತದೆ. ಅಂತೆಯೇ, ಕೊಲೆ ಮಾಡಿ ಶವವನ್ನು ಕಾರಿನಲ್ಲಿಯೇ ಹಾಕಿಕೊಂಡು ಕೊಲ್ಲಾಪೂರಕ್ಕೆ ಹೋಗುವಾಗ ಕಲಘಟಗಿ ಬಳಿ ಸಿಎನ್‌ಜಿ ಪಂಪ್‌ನಲ್ಲಿ ಈ ಎಲ್ಲ ಆರೋಪಿಗಳು ಕೆಳಗೆ ಇಳಿದಿದ್ದು, ಇದು ಸಿಸಿ ಟಿವಿ ಮೂಲಕ ಗೊತ್ತಾಯಿತು. ಹೀಗಾಗಿ ಆರೋಪಿಗಳನ್ನು ಪತ್ತೆ ಹಚ್ಚಲು ತುಂಬ ಸುಲಭವಾಯಿತು ಎಂದು ಗುಂಜನ ಆರ್ಯ ಮಾಹಿತಿ ನೀಡಿದರು.

ಎಎಸ್ಪಿ ಶಿವಾನಂದ ಕಟಗಿ, ವಿನೋದ ಮುಕ್ತೇದಾರ, ಪಿಐ ಎಸ್.ಎಸ್. ಕಮತಗಿ ಹಾಗೂ ಗ್ರಾಮೀಣ ಪೊಲೀಸರು ಐದು ದಿನಗಳಲ್ಲಿಯೇ ಈ ಕೊಲೆ ಪ್ರಕರಣವನ್ನು ಬೇಧಿಸಿದ್ದು, ಅವರಿಗೆ ನಗದು ಬಹುಮಾನ ಸಹ ನೀಡಲಾಗುವುದು ಎಂದು ಎಸ್ಪಿ ಹೇಳಿದರು.

ದೇಶದ ಜನತೆ ಬಿಜೆಪಿಗೆ ಆಶೀರ್ವದಿಸಿದ್ದಾರೆ

ಶಿರಸಿ: ಪಂಚ ರಾಜ್ಯಗಳ ವಿಧಾನಸಭಾ ಚುನಾವಣಾ ಫಲಿತಾಂಶದಲ್ಲಿ ಬಿಜೆಪಿ ಮತ್ತು ಎನ್‌ಡಿಎ ಮೈತ್ರಿಕೂಟ ಅಭೂತಪೂರ್ವ ಗೆಲುವನ್ನು ಸಾಧಿಸಿದೆ. ವಿಕಸಿತ ಭಾರತದ ಕನಸನ್ನು ನನಸು ಮಾಡಲು ದೇಶದ ಜನತೆ ಬಿಜೆಪಿ ಸಮರ್ಥ ನಾಯಕತ್ವದ ನಂಬಿಕೆ ಇಟ್ಟು ಆಶೀರ್ವದಿಸಿದ್ದಾರೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಲ್ಲದೆ ರಾಷ್ಟ್ರದ ಐಕ್ಯತೆ, ಅಖಂಡತೆ ಮತ್ತು ರಾಷ್ಟ್ರೀಯತೆಯ ಪರವಾಗಿ ಜನಸಾಮಾನ್ಯರು ಸ್ಪಷ್ಟ ಸಂದೇಶ ನೀಡಿದ್ದಾರೆ. ನಮ್ಮ ಹೆಮ್ಮೆಯ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದರ್ಶಿತ್ವ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸಮರ್ಥ ಮಾರ್ಗದರ್ಶನದಲ್ಲಿ ಭಾರತವು ಸದೃಢವಾಗಿ ಮುನ್ನಡೆಯುತ್ತಿರುವುದಕ್ಕೆ ಈ ಫಲಿತಾಂಶವೇ ಸಾಕ್ಷಿಯಾಗಿದೆ ಎಂದು ತಿಳಿಸಿದ್ದಾರೆ.

ರಾಷ್ಟ್ರೀಯತೆ, ಅಭಿವೃದ್ಧಿಗೆ ಸಂದ ಜಯ: ರೂಪಾಲಿ

ಕಾರವಾರ ಸೋಮವಾರ ಪ್ರಕಟವಾದ ಐದು ರಾಜ್ಯಗಳ ಚುನಾವಣಾ ಫಲಿತಾಂಶ ಪ್ರಧಾನಿ ನರೇಂದ್ರ ಮೋದಿ ಅವರ ಸಮರ್ಥ ನಾಯಕತ್ವ, ಬಿಜೆಪಿ ಹಾಗೂ ಎನ್‌ಡಿಎ ಮೈತ್ರಿಕೂಟದ ಅಭಿವೃದ್ಧಿಪರ ಆಡಳಿತಕ್ಕೆ ದೊರೆತ ಜಯವಾಗಿದೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷೆ, ಕಾರವಾರ, ಅಂಕೋಲಾ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕಿ ರೂಪಾಲಿ ಎಸ್.ನಾಯ್ಕ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ರಾಷ್ಟ್ರೀಯತೆ, ಅಭಿವೃದ್ಧಿ, ಏಕತೆಗೆ ಮತದಾರ ಒಲವು ವ್ಯಕ್ತಪಡಿಸಿರುವುದು ಈ ಫಲಿತಾಂಶವೇ ಸಾಕ್ಷಿಯಾಗಿದೆ. ದೇಶಾದ್ಯಂತ ಎನ್‌ಡಿಎ ಸರ್ಕಾರದ ದೂರದೃಷ್ಟಿಯ ಆಡಳಿತಕ್ಕೆ ಗೆಲುವು ದೊರೆತಂತಾಗಿದೆ. ಈ ಜಯಕ್ಕಾಗಿ ಹಗಲಿರುಳು ದುಡಿದ ಪಕ್ಷದ ಎಲ್ಲ ನಾಯಕರು, ಕಾರ್ಯಕರ್ತರು, ಪದಾಧಿಕಾರಿಗಳು ಹಾಗೂ ಎನ್‌ಡಿಎ ಮೈತ್ರಿಕೂಟಕ್ಕೆ ಮತನೀಡಿ ಆಶೀರ್ವದಿಸಿದ ಎಲ್ಲ ಮತದಾರರಿಗೆ ಕೃತಜ್ಞತೆಗಳನ್ನು ಸಲ್ಲಿಸುವುದಾಗಿ ರೂಪಾಲಿಎಸ್.ನಾಯ್ಕಪ್ರಕಟಣೆಯಲ್ಲಿ ತಿಳಿಸಿದ್ದಾರೆ.